
# ಅಧಿವೇಶನದಲ್ಲಿ ಸರ್ಕಾರವನ್ನು ಕಟ್ಟಿಹಾಕಲು BJP-JDS ಸಜ್ಜು..!

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆ, ಕರ್ನಾಟಕ ಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ನಡೆದಿದೆ ಎನ್ನಲಾದ ಅಕ್ರಮ, ಪೊಲೀಸ್ ನೇಮಕಾತಿ, ನೈಸ್ ಸಂಸ್ಥೆಯ ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ (ಬಿಎಂಐಸಿ) ಯೋಜನೆ, ಗೃಹಲಕ್ಷ್ಮೀ ಯೋಜನೆಯ ಹಣದ ದುರ್ಬಳಕೆ ಆರೋಪ, ವಾಲ್ಮೀಕಿ ನಿಗಮದಲ್ಲಿನ ಹಗರಣ, ಬರ ಪರಿಸ್ಥಿತಿ, ಬೆಂಗಳೂರಿನ ಅಸಮರ್ಪಕ ತ್ಯಾಜ್ಯ ನಿರ್ವಹಣೆ ಸೇರಿದಂತೆ ಹಲವು ವಿಚಾರಗಳನ್ನು ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಜಂಟಿಯಾಗಿ ಪ್ರಸ್ತಾಪಿಸಲು ಬಿಜೆಪಿ ಮತ್ತು



ಉದಯವಾಹಿನಿ ಚಿತ್ರ

ಜೆಡಿಎಸ್ ನಿರ್ಧರಿಸಿವೆ. ಆಗಸ್ಟ್ 13ರಿಂದ ಆರಂಭವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಪ್ರಸ್ತಾಪಿಸಬೇಕಾದ ಪ್ರಮುಖ ವಿಚಾರಗಳು ಹಾಗೂ ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ

> ಬಿಡದಿ ಟೌನ್‌ಶಿಪ್ ವಿಚಾರವಾಗಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆಯಲಿರುವ ಪಾದಯಾತ್ರೆಗೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಿದೆ.
> ಎಚ್.ಡಿ. ಕುಮಾರಸ್ವಾಮಿ

ಜೆಡಿಎಸ್ ಹಮ್ಮಿಕೊಂಡಿರುವ ಪಾದಯಾತ್ರೆ ಕುರಿತು ಚರ್ಚಿಸಲು ಬಿಜೆಪಿ-ಜೆಡಿಎಸ್ ನಾಯಕರು ಸಭೆ ನಡೆಸಿದರು. ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು, ಅಧಿವೇಶನದಲ್ಲಿ ಪ್ರಮುಖ ವಿಚಾರಗಳನ್ನೂ ಎರಡೂ ಪಕ್ಷಗಳು ಒಗ್ಗಟ್ಟಾಗಿ ಕೈಗೆತ್ತಿಕೊಳ್ಳಲಿವೆ ಎಂದು ಹೇಳಿದರು.

ಬಿಜೆಪಿ ಮತ್ತು ಜೆಡಿಎಸ್ ನಡುವೆ ಸಮನ್ವಯಕ್ಕಾಗಿ ತಲಾ ಐವರು ನಾಯಕರನ್ನು ಒಳಗೊಂಡ ಸಮನ್ವಯ ಸಮಿತಿಯನ್ನು ರಚಿಸಲಾಗುವುದು. ಅಧಿವೇಶನದ ಸಂದರ್ಭದಲ್ಲಿ ಉಭಯ ಪಕ್ಷಗಳ ನಾಯಕರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಹೋರಾಟ ನಡೆಸಲಿದ್ದಾರೆ ಎಂದು ತಿಳಿಸಿದರು. ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್ ಹಮ್ಮಿಕೊಂಡಿರುವ ಪಾದಯಾತ್ರೆಯಲ್ಲಿ ಬಿಜೆಪಿ ಕಾರ್ಯಕರ್ತರೂ ಭಾಗವಹಿಸಲಿದ್ದಾರೆ.

## 1,909 ಅಕ್ರಮ ವಲಸಿಗರು ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಎಲೆಕ್ಟ್ರಾನಿಕ್ ಸಿಟಿ ಉಪವಿಭಾಗದ ಪೊಲೀಸರು 29 ಸ್ಥಳಗಳಲ್ಲಿ ನಡೆಸಿದ ಭರ್ಜರಿ ಕಾರ್ಯಾಚರಣೆಯಲ್ಲಿ ಅಕ್ರಮ ವಲಸಿಗರೆಂದು ಶಂಕಿಸಲಾದ 1,909 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ. ಇವರಲ್ಲಿ 15 ಮಂದಿ ಬಾಂಗ್ಲಾದೇಶದ ಪ್ರಜೆಗಳು ಎಂಬುದು ಬಳಿಕ ದೃಢಪಟ್ಟಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ ಪ್ರದೇಶದಲ್ಲಿ ವಾಸಿಸುತ್ತಿರುವ ಅಕ್ರಮ ವಲಸಿಗರನ್ನು ಗುರುತಿಸಿ ವಶಕ್ಕೆ ಪಡೆಯುವ ಉದ್ದೇಶದಿಂದ ನಡೆದ ಜಂಟಿ ಕಾರ್ಯಾಚರಣೆಯಲ್ಲಿ ಒಟ್ಟು 295 ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿದ್ದರು. ದಾಖಲೆಗಳ ಪರಿಶೀಲನೆ ಬಳಿಕ 15 ಮಂದಿ ಅಕ್ರಮವಾಗಿ ಭಾರತ ಪ್ರವೇಶಿಸಿರುವ ಬಾಂಗ್ಲಾದೇಶದ ಪ್ರಜೆಗಳು ಎಂಬುದು ದೃಢಪಟ್ಟಿದೆ. ಅವರ ಬಳಿ ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ಮೂಲದವರು ಎಂದು ನಮೂದಿಸಿರುವ ನಕಲಿ ಆಧಾರ್ ಕಾರ್ಡ್‌ಗಳು ಪತ್ತೆಯಾಗಿವೆ.

## ಈ ಊರಿಗೆ ಹೋಗುವವರಿಗೆ ಶೇ.10 ರಷ್ಟು ಡಿಸ್ಕೌಂಟ್!

• ಉದಯವಾಹಿನಿ, ಬೆಂಗಳೂರು

ಇನ್ನೇನು ಹಬ್ಬದ ಸೀಸನ್ ಪ್ರಾರಂಭವಾಗುತ್ತಿದೆ. ಹಾಗಾಗಿ, ಕೆಲಸದ ನಿಮಿತ್ತ ಸಿಲಿಕನ್ ಸಿಟಿ ಬೆಂಗಳೂರಿಗೆ ಬಂದವರಲ್ಲಿ ಬಹುತೇಕರು ಹಬ್ಬಕ್ಕೆ ಊರಿಗೆ ಹೋಗುವ ಪ್ಲಾನ್ ಮಾಡುತ್ತಿರುತ್ತಾರೆ.

ಅಂತಹ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ವಿಶೇಷ ರಿಯಾಯಿತಿ ಹಾಗೂ ಹೆಚ್ಚುವರಿ ಬಸ್‌ಗಳ ವ್ಯವಸ್ಥೆಯನ್ನು ಪ್ರಕಟಿಸಿದೆ. ಹೌದು, ಓಣಂ ಹಬ್ಬ ಮತ್ತು ಸಾಲು ಸಾಲು ರಜೆಗಳ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ಕೇರಳದ ವಿವಿಧ ಭಾಗಗಳಿಗೆ ಪ್ರಯಾಣಿಸುವವರಿಗಾಗಿ ವಿಶೇಷ ರಿಯಾಯಿತಿ ಹಾಗೂ ಹೆಚ್ಚುವರಿ ಬಸ್‌ಗಳ ವ್ಯವಸ್ಥೆಯನ್ನು ಪ್ರಕಟಿಸಿದೆ. ಹಾಗಾಗಿ, ಆನ್‌ಲೈನ್‌ನಲ್ಲಿ ಮುಂಗಡವಾಗಿ ಟಿಕೆಟ್ ಬುಕ್ ಮಾಡುವ ಪ್ರಯಾಣಿಕರಿಗೆ ಶೇ.10ರ ವರೆಗೆ ರಿಯಾಯಿತಿ ಸಿಗಲಿದೆ.

**ಗ್ರೂಪ್ ಬುಕಿಂಗ್ ಡಿಸ್ಕೌಂಟ್:** ಒಂದೇ ಟಿಕೆಟ್‌ನಲ್ಲಿ 4 ಅಥವಾ ಅದಕ್ಕಿಂತ ಹೆಚ್ಚು ಪ್ರಯಾಣಿಕರಿಗೆ ಒಟ್ಟಿಗೆ ಸೀಟು ಕಾಯ್ದಿರಿಸಿದರೆ ಮೂಲ ದರದಲ್ಲಿ ಶೇ.5 ರಷ್ಟು ರಿಯಾಯಿತಿ ಸಿಗಲಿದೆ.

**ರಿಟರ್ನ್ ಜರ್ನಿ ಡಿಸ್ಕೌಂಟ್:** ಹೋಗುವ ಮತ್ತು ಬರುವ ಎರಡು ಕಡೆಯ ಟಿಕೆಟ್‌ಗಳನ್ನು ಒಟ್ಟಿಗೇ ಬುಕ್ ಮಾಡಿದರೆ, ಬರುವ ಪ್ರಯಾಣದ ಟಿಕೆಟ್ ದರದ ಮೇಲೆ ಶೇ.10 ರಷ್ಟು ಡಿಸ್ಕೌಂಟ್ ದೊರೆಯಲಿದೆ.

ಮುಂದುವರೆದು, ಬೆಂಗಳೂರಿನಲ್ಲಿ ನೆಲೆಸಿರುವ ಕೇರಳ ಮೂಲದ ಪ್ರಯಾಣಿಕರು ಓಣಂ ಹಬ್ಬಕ್ಕೆ ತೆರಳಲು ಕೆಎಸ್‌ಆರ್‌ಟಿಸಿ, ಆಗಸ್ಟ್ 21 ರಿಂದ ಆಗಸ್ಟ್ 25 ರವರೆಗೆ ಬೆಂಗಳೂರಿನಿಂದ ಕೇರಳದ ವಿವಿಧ ಭಾಗಗಳಿಗೆ ವಿಶೇಷ ಬಸ್‌ಗಳು ಸಂಚರಿಸಲಿವೆ. ಇದರೊಂದಿಗೆ, ಹಬ್ಬ ಮುಗಿಸಿ ಪ್ರಯಾಣಿಕರು ಮರಳಿ ಬರಲು ಆಗಸ್ಟ್ 30 ರಂದು ಕೇರಳದ ವಿವಿಧೆಡೆಯಿಂದ ಬೆಂಗಳೂರಿಗೆ ವಿಶೇಷ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ.

## ದಾಂಪತ್ಯ ಕಲಹವನ್ನು ಕ್ರಿಮಿನಲ್ ಕ್ರೌರ್ಯವೆಂದು ಪರಿಗಣಿಸಲಾಗದು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ವೈವಾಹಿಕ ಹೊಂದಾಣಿಕೆಯ ಕೊರತೆ, ದಾಂಪತ್ಯ ಕಲಹ ಅಥವಾ ವಿವಾಹ ಸಂಬಂಧದ ಅನ್ಯೈಕ್ಯತೆಯನ್ನು ಕ್ರೌರ್ಯದ ಆರೋಪದಡಿ ಕ್ರಿಮಿನಲ್ ಪ್ರಕರಣವಾಗಿ ಪರಿವರ್ತಿಸಲು ಕ್ರಿಮಿನಲ್ ಕಾನೂನನ್ನು ಬಳಸಲು ಅವಕಾಶ ನೀಡಲಾಗುವುದಿಲ್ಲ ಎಂದು ಹೈಕೋರ್ಟ್ ಹೇಳಿದೆ. ಮೈಸೂರಿನ ಪೊಲೀಸ್ ಅಧಿಕಾರಿಯೊಬ್ಬರ ವಿರುದ್ಧ ದಾಖಲಾಗಿದ್ದ ಪ್ರಕರಣದ ವಿಚಾರಣೆಯನ್ನು ರದ್ದುಗೊಳಿಸುವ ಸಂದರ್ಭದಲ್ಲಿ ನ್ಯಾಯಾಲಯ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಅರ್ಜಿದಾರರು ಹಾಗೂ ದೂರುದಾರ ದಂಪತಿ ಇಬ್ಬರೂ ಪೊಲೀಸ್ ಅಧಿಕಾರಿಗಳಾಗಿದ್ದು, 2023ರಲ್ಲಿ ವಿವಾಹವಾಗಿದ್ದರು. ವಿವಾಹವಾದ ನಾಲ್ಕು ತಿಂಗಳೊಳಗೇ ಪತ್ನಿ ದೂರು ದಾಖಲಿಸಿ, ತಮ್ಮ ಮಧ್ಯೆ ಹೊಂದಾಣಿಕೆ ಬರುತ್ತಿಲ್ಲ ಎಂದು ಆರೋಪಿಸಿದ್ದರು.

ಪೊಲೀಸರು ಅರ್ಜಿದಾರರ ವಿರುದ್ಧ ಐಪಿಸಿ ಸೆಕ್ಷನ್ 498ಎ, 504 ಮತ್ತು 506ರ ಅಡಿಯಲ್ಲಿ ಪ್ರಕರಣ ದಾಖಲಿಸಿ ಆರೋಪಪಟ್ಟಿ ಸಲ್ಲಿಸಿದ್ದರು. ವಿವಾಹ ಸಂಬಂಧ ಪೂರ್ಣಗೊಳ್ಳದಿರುವುದನ್ನು ಐಪಿಸಿ ಸೆಕ್ಷನ್ 498ಎ ಅಡಿಯಲ್ಲಿ ಕ್ರೌರ್ಯದ ಅಂಶವೆಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಅರ್ಜಿದಾರರು ವಾದಿಸಿದರು.

ಇತರ ಆರೋಪಗಳಿಗೆ ಸಂಬಂಧಿಸಿದಂತೆ, ದೂರುದಾರರು ಕೆಲವು ಹಲ್ಲೆಗಳ ಬಗ್ಗೆ ಅಸ್ಪಷ್ಟ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಅವರು ಪ್ರತಿಪಾದಿಸಿದರು. ಇದಕ್ಕೆ ಪ್ರತಿಯಾಗಿ, ಆರೋಪಪಟ್ಟಿಯ ಸಾರಾಂಶದಲ್ಲೇ ಅಪರಾಧಗಳು ಸಾಬೀತಾಗುವ ಅಂಶಗಳಿವೆ ಎಂದು ದೂರುದಾರ ಪತ್ನಿ ವಾದಿಸಿದರು. ಅರ್ಜಿದಾರರು ತಮ್ಮನ್ನು ವಿವಾಹವಾದ ಕ್ರಮವೇ ಕ್ರೌರ್ಯವಾಗುತ್ತದೆ. ಏಕೆಂದರೆ ಅವರು ದಾಂಪತ್ಯ ಸಂಬಂಧ ಹೊಂದದೆ, ನಾವು ಕೇವಲ ಸ್ನೇಹಿತರಾಗಿರೋಣ ಎಂದು ಹೇಳುತ್ತಿದ್ದರು ಎಂದು ಆರೋಪಿಸಿದರು. ಅರ್ಜಿದಾರರು ಮತ್ತೊಬ್ಬ ಮಹಿಳೆಯೊಂದಿಗೆ ಸಂಬಂಧ ಹೊಂದಿದ್ದಾರೆ ಎಂದೂ ದೂರುದಾರರು ಆರೋಪಿಸಿದ್ದರು. ದಾಖಲೆಗಳಲ್ಲಿರುವ ಸಾಕ್ಷ್ಯಗಳನ್ನು ಪರಿಶೀಲಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ, ಅಲ್ಪಾವಧಿಯ ದಾಂಪತ್ಯ ಜೀವನದ ಅವಧಿಯಲ್ಲಿ ಪತಿ ವೈವಾಹಿಕ ಸಂಬಂಧ ಹೊಂದಿಲ್ಲ.

> ವೈವಾಹಿಕ ಹೊಂದಾಣಿಕೆಯ ಕೊರತೆ, ದಾಂಪತ್ಯ ಕಲಹ ಅಥವಾ ವಿವಾಹ ಸಂಬಂಧದ ಅನ್ಯೈಕ್ಯತೆಯನ್ನು ಕಾನೂನುಬದ್ಧ ಆಧಾರವಿಲ್ಲದ ಸೃಷ್ಟಿತ ಆರೋಪಗಳನ್ನು ಸೇರಿಸುವ ಸರಳ ತಂತ್ರದ ಮೂಲಕ ಕ್ರೌರ್ಯದ ಪ್ರಕರಣವಾಗಿ ಪರಿವರ್ತಿಸಲು ಕ್ರಿಮಿನಲ್ ಕಾನೂನನ್ನು ಬಳಸಲು ಅವಕಾಶ ನೀಡಲಾಗುವುದಿಲ್ಲ
> ನ್ಯಾಯಮೂರ್ತಿ ನಾಗಪ್ರಸನ್ನ

## ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳ ಮಾಹಿತಿ ಸೋರಿಕೆ: ಇಬ್ಬರು ಸಿಬ್ಬಂದಿ ಬಂಧನ

• ಉದಯವಾಹಿನಿ, ಬೆಂಗಳೂರು

ಸದಾ ಅಕ್ರಮಗಳಿಂದಲೇ ಸದ್ದು ಮಾಡುವ ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ)ದ ನೇಮಕಾತಿ ಪ್ರಕ್ರಿಯೆಯಲ್ಲಿ ಈಗ ಮತ್ತೊಂದು ಗಂಭೀರ ಅಕ್ರಮ ಬೆಳಕಿಗೆ ಬಂದಿದ್ದು, ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳ ಮಾಹಿತಿ ಸೋರಿಕೆ ಮಾಡಿದ ಆರೋಪದ ಮೇಲೆ ಇಬ್ಬರು ಸಿಬ್ಬಂದಿಯನ್ನು ವಿಧಾನಸೌಧ ಠಾಣೆ ಪೊಲೀಸರು ಬಂಧಿಸಿದ್ದಾರೆ. ಜಲಸಂಪನ್ಮೂಲ ಇಲಾಖೆಯ ಕಿರಿಯ ಇಂಜಿನಿಯರ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:3 ಅನುಪಾತದ ಅರ್ಹತಾ ಪಟ್ಟಿಯಲ್ಲಿದ್ದ ಅಭ್ಯರ್ಥಿಗಳ ಮೊಬೈಲ್ ಸಂಖ್ಯೆ ಹಾಗೂ ಇತರ ವಿವರಗಳನ್ನು ಆಯೋಗದ ಒಳಗಿನಿಂದಲೇ ಮಧ್ಯವರ್ತಿಗಳಿಗೆ ಒದಗಿಸಲಾಗಿರುವುದು ತನಿಖೆಯಲ್ಲಿ ಪತ್ತೆಯಾಗಿದೆ. ಕೆಪಿಎಸ್‌ಸಿಯ ತಾಂತ್ರಿಕ ಸಹಾಯಕ ಶರಣಪ್ಪ ಅಡವಳ್ಳಿ ಮತ್ತು ಹಿರಿಯ ಸಹಾಯಕ ಸ್ವಾಮಿದಾಸ್ ಅವರನ್ನು ಪೊಲೀಸರು ಬಂಧಿಸಿದ್ದು, ಆರೋಪಿಸಿ ಕೆಲವು ಅಭ್ಯರ್ಥಿಗಳು ಆಯೋಗಕ್ಕೆ ದೂರು ನೀಡಿದ್ದರು. ''ನಾವು ಆಯೋಗದವರೇ, ಲಕ್ಷಾಂತರ ರೂಪಾಯಿ ನೀಡಿದರೆ ಉದ್ಯೋಗ ಖಚಿತ'' ಎಂದು ಹೇಳಿರುವ ಆಡಿಯೋ ಹಾಗೂ ವಾಟ್ಸ್ ಆಪ್ ದಾಖಲೆಗಳನ್ನು ಅವರು ಸಲ್ಲಿಸಿದ್ದರು.

## ಶಿವಗಂಗೆ ಬೆಟ್ಟಕ್ಕೆ ಟ್ರೆಕ್ಕಿಂಗ್‌ಗೆ ಹೋಗಿದ್ದ ಬೆಂಗಳೂರಿನ ಟೆಕ್ಕಿ ನಾಪತ್ತೆ

• ಉದಯವಾಹಿನಿ, ಬೆಂಗಳೂರು

ಪ್ರಸಿದ್ಧ ಪ್ರವಾಸಿ ತಾಣವಾದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಶಿವಗಂಗೆ ಬೆಟ್ಟದಲ್ಲಿ ಟ್ರೆಕ್ಕಿಂಗ್‌ಗೆ ಹೋಗಿದ್ದ ಬೆಂಗಳೂರಿನ ಟೆಕ್ಕಿಯೊಬ್ಬರು ನಿಗೂಢವಾಗಿ ನಾಪತ್ತೆಯಾಗಿದ್ದು, ಹಲವು ಅನುಮಾನಗಳಿಗೆ ಕಾರಣವಾಗಿದೆ. ನಾಪತ್ತೆಯಾಗಿರುವ ಟೆಕ್ಕಿಯನ್ನು ಬೆಂಗಳೂರಿನ 31 ವರ್ಷದ ಅದ್ವೈತ್ ಉಪಾಧ್ಯಾಯ ಎಂದು ಗುರುತಿಸಲಾಗಿದ್ದು, ನಿನ್ನೆ ಬೆಳಗ್ಗೆಯಿಂದ ಕಾಣೆಯಾಗಿದ್ದಾರೆ. ಅವರ ಮೊಬೈಲ್ ಫೋನ್ ಸ್ವಿಚ್ ಆಫ್ ಆಗಿರುವುದರಿಂದ ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಶುಕ್ರವಾರ ಬೆಳಗ್ಗೆ ಶಿವಗಂಗೆ ಬೆಟ್ಟಕ್ಕೆ ಟ್ರೆಕ್ಕಿಂಗ್‌ಗೆ ಬಂದಿದ್ದ ಅದ್ವೈತ್, ಬೆಟ್ಟದ ಪಾರ್ಕಿಂಗ್‌ನಲ್ಲಿ ಬುಲೆಟ್ ಬೈಕ್ ಪಾರ್ಕ್ ಮಾಡಿ ಬೆಟ್ಟ ಏರಿದ ನಂತರ ನಾಪತ್ತೆಯಾಗಿದ್ದಾರೆ. ಈ ಸಂಬಂಧ ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಾಗಿದ್ದು, ಶಿವಗಂಗೆ ಬೆಟ್ಟದ ಶಾಂತಲಾ ಡ್ರಾಪ್‌ನಲ್ಲಿ ಪೊಲೀಸರು ಶೋಧ ಕಾರ್ಯ ನಡೆಸುತ್ತಿದ್ದಾರೆ.

# ಅಧಿವೇಶನಕ್ಕೂ ಮುನ್ನ ಬಿಕ್ಕಟ್ಟು ಶಮನಕ್ಕೆ ಡಿಕೆಶಿ ಪ್ಲ್ಯಾನ್

### ಹೈಕಮಾಂಡ್ ಮಧ್ಯಸ್ಥಿಕೆಗೆ ಕೋರಿ ದೆಹಲಿಗೆ ದೌಡು..?

### ರಾಹುಲ್ ಮಧ್ಯಪ್ರವೇಶಿಸುತ್ತಾರೆಯೇ ಎಂಬುದು ಕುತೂಹಲ

• ಉದಯವಾಹಿನಿ, ಬೆಂಗಳೂರು

**1** ಅಸಮಾಧಾನಕ್ಕೆ ಭುಗಿಲೇಳುವಂತೆ ಮಾಡಿದೆ
**2** ಮತ್ತಷ್ಟು ವಿಳಂಬವಾಗುವ ಸಾಧ್ಯತೆ ಇದೆ
**3** ದೆಹಲಿಯಲ್ಲಿ ಚರ್ಚೆ ನಡೆಯುವ ಸಾಧ್ಯತೆ

ಇತ್ತೀಚಿನ ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ ಹಾಗೂ ಸಚಿವರಿಗೆ ಖಾತೆ ಹಂಚಿಕೆ ವಿಳಂಬದ ಸಮಸ್ಯೆ ಬಗೆಹರಿಸಲು ಪಕ್ಷದ ಹೈಕಮಾಂಡ್ ಮಧ್ಯಸ್ಥಿಕೆ ಕೋರಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನವದೆಹಲಿಗೆ ತೆರಳುವ ಸಾಧ್ಯತೆ ಇದೆ.

ಆದರೆ, ಮುಖ್ಯಮಂತ್ರಿ ದೆಹಲಿ ಪ್ರವಾಸದ ಕುರಿತು ಮುಖ್ಯಮಂತ್ರಿಗಳ ಕಚೇರಿ ಮೂಲಗಳು ಅಧಿಕೃತವಾಗಿ ಖಚಿತಪಡಿಸಿಲ್ಲ. ಒಂದು ವೇಳೆ ಅವರ ದೆಹಲಿ ಪ್ರವಾಸ ಮುಂದೂಡಿಕೆಯಾದರೆ, ಸಚಿವರಿಗೆ ಖಾತೆ ಹಂಚಿಕೆ ಕೂಡ ಮತ್ತಷ್ಟು ವಿಳಂಬವಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಆಗಸ್ಟ್ 3ರಂದು ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದ ಮೊದಲ ಹಂತದ ವಿಸ್ತರಣೆಯಲ್ಲಿ 19 ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಆದರೆ, ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿ ಹಲವು ದಿನಗಳು ಕಳೆದರೂ ಖಾತೆ ಹಂಚಿಕೆಯಾಗದಿರುವುದು ಕಾಂಗ್ರೆಸ್ ಸರ್ಕಾರದೊಳಗೆ ಅಸಮಾಧಾನಕ್ಕೆ ಭುಗಿಲೇಳುವಂತೆ ಮಾಡಿದೆ.

ಆಗಸ್ಟ್ 13ರಿಂದ ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಆರಂಭವಾಗಲಿದ್ದು, ಅದಕ್ಕೂ ಮುನ್ನ ಸಚಿವ ಸಂಪುಟಕ್ಕೆ ಸಂಬಂಧಿಸಿದ ಗೊಂದಲಗಳನ್ನು ಬಗೆಹರಿಸಿಕೊಳ್ಳಲು ಶಿವಕುಮಾರ್ ಬಯಸಿದ್ದಾರೆ.

ಪ್ರಸ್ತುತ ಕಾಂಗ್ರೆಸ್ ಹೈಕಮಾಂಡ್ ಮುಂದಿರುವ ಪ್ರಮುಖ ಮೂರು ಸವಾಲುಗಳೆಂದರೆ, ಖಾಲಿ ಇರುವ ಒಂದು ಸಚಿವ ಸ್ಥಾನಕ್ಕೆ ಮಹಿಳೆಗೆ ಅವಕಾಶ ಕಲ್ಪಿಸುವುದು, ವಿಜಯನಗರ ಶಾಸಕ ಎಂ. ಕೃಷ್ಣಪ್ಪ ಅವರನ್ನು ಸಮಾಧಾನಪಡಿಸುವುದು ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲ ಹೊಂದಿರುವ ಬಾದಾಮಿ ಶಾಸಕ ಬಸವರಾಜ ಶಿವಣ್ಣನವರ್ ಅವರನ್ನು ಸಚಿವ ಸಂಪುಟಕ್ಕೆ ಸೇರಿಸುವುದು. ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಎಂ. ಕೃಷ್ಣಪ್ಪ ಅವರ ಪುತ್ರ ಪ್ರಿಯಾ ಕೃಷ್ಣ ಈಗಾಗಲೇ ನವದೆಹಲಿಯಲ್ಲಿ ಬೀಡುಬಿಟ್ಟಿದ್ದಾರೆ. ಅವರು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿದ್ದು, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಲು ಸಮಯಕ್ಕಾಗಿ ಕಾಯುತ್ತಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರ ಸಲಹೆಯಂತೆ, ಶುಕ್ರವಾರ ಸಂಜೆ ಸಿದ್ದರಾಮಯ್ಯ ಅವರೊಂದಿಗೆ ಚರ್ಚೆ ನಡೆಸಿರುವ ಡಿ.ಕೆ. ಶಿವಕುಮಾರ್, ದೆಹಲಿಯಲ್ಲಿ ಕರ್ನಾಟಕ ಕಾಂಗ್ರೆಸ್



ಉದಯವಾಹಿನಿ ಚಿತ್ರ

ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ಭೇಟಿಯಾಗುವ ಸಾಧ್ಯತೆ ಇದೆ. ಸಚಿವ ಸಂಪುಟದಲ್ಲಿನ ಅಸಮಾಧಾನವನ್ನು ಹೇಗೆ ಬಗೆಹರಿಸಬೇಕು ಎಂಬುದರ ಕುರಿತು ದೆಹಲಿಯಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ. ಅಗತ್ಯವಿದ್ದರೆ ಈಗಾಗಲೇ ಸಚಿವರಾಗಿರುವ ಒಬ್ಬರು ಅಥವಾ ಇಬ್ಬರನ್ನು ಬದಲಿಸಿ ಅಸಮಾಧಾನಗೊಂಡಿರುವ ನಾಯಕರಿಗೆ ಅವಕಾಶ ನೀಡುವ ವಿಚಾರದಲ್ಲೂ ರಾಹುಲ್ ಗಾಂಧಿ ಮಧ್ಯಪ್ರವೇಶಿಸುತ್ತಾರೆಯೇ ಎಂಬುದು ಕುತೂಹಲ ಮೂಡಿಸಿದೆ ಎಂದು ಪಕ್ಷದ ಆಂತರಿಕ ಮೂಲವೊಂದು ತಿಳಿಸಿದೆ. ಈ ನಡುವೆ, ನಾಗಮಂಗಲ ಶಾಸಕ ಹಾಗೂ ಸಚಿವ ಎನ್. ಚಲುವರಾಯಸ್ವಾಮಿ ಅವರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಿ ಎಂ. ಕೃಷ್ಣಪ್ಪ ಅವರಿಗೆ ಅವಕಾಶ ಕಲ್ಪಿಸುವ ಸಾಧ್ಯತೆ ಇದೆ ಎಂಬ ಮಾತುಗಳು ಕೇಳಿಬಂದಿವೆ.

> ಮತ್ತೊಂದೆಡೆ, ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ ಅವರನ್ನೂ ಸಚಿವ ಸ್ಥಾನದಿಂದ ಕೈಬಿಡುವ ಸಾಧ್ಯತೆ ಇದೆ ಎಂಬ ವದಂತಿ ಹರಿದಾಡಿತ್ತು. ಆದರೆ, ಈ ಕುರಿತು ಪ್ರತಿಕ್ರಿಯಿಸಿರುವ ಚಲುವರಾಯಸ್ವಾಮಿ, ಸಂಪುಟದಲ್ಲಿ ಯಾವುದೇ ಬದಲಾವಣೆ ನಡೆಯುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.-ಚಲುವರಾಯಸ್ವಾಮಿ

**ಸಚಿವ ಸ್ಥಾನ ನೀಡುವ ಸಾಧ್ಯತೆ**

ಇದೇ ವೇಳೆ, ಬಳ್ಳಾರಿ ಗ್ರಾಮೀಣ ಶಾಸಕ ಹಾಗೂ ಸಚಿವ ಬಿ. ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಿ ಸಂಡೂರು ಶಾಸಕಿಯೂ ಆಗಿರುವ ಬಳ್ಳಾರಿ ಸಂಸದ ಇ. ತುಕಾರಾಂ ಅವರ ಪತ್ನಿ ಇ. ಅನ್ನಪೂರ್ಣ ಅವರಿಗೆ ಸಚಿವ ಸ್ಥಾನ ನೀಡುವ ಸಾಧ್ಯತೆ ಇದೆ ಎಂಬ ಚರ್ಚೆಯೂ ನಡೆಯುತ್ತಿದೆ.

> ಎಚ್.ಸಿ. ಬಾಲಕೃಷ್ಣ ಕೂಡ ವ್ಯಂಗ್ಯವಾಗಿ ಪ್ರತಿಕ್ರಿಯಿಸಿ, ಪಕ್ಷದ ಹಿತಾಸಕ್ತಿ ಕಾಪಾಡಬೇಕಾದರೆ 30 ಸಚಿವರೇ ರಾಜೀನಾಮೆ ನೀಡಬೇಕಾಗುತ್ತದೆ ಎಂಬ ರೀತಿಯಲ್ಲಿ ಹೇಳಿಕೆ ನೀಡಿದ್ದಾರೆ.

**ಸ್ಪೀಕರ್ ಆಗಿ ಕಾರ್ಯನಿರ್ವಹಿಸುವಂತೆ ಮನವೊಲಿಸಿದ್ದಾರೆ**

ಬೆಳವಣಿಗೆಗಳ ನಡುವೆ ಡಿ.ಕೆ. ಶಿವಕುಮಾರ್ ದೆಹಲಿಯಲ್ಲಿರುವ ಕರ್ನಾಟಕ ಸರ್ಕಾರದ ಪ್ರತಿನಿಧಿ ಟಿ.ಬಿ. ಜಯಚಂದ್ರ ಅವರನ್ನು ಭೇಟಿಯಾಗಿದ್ದರು. ವಿಧಾನಸಭೆಯಲ್ಲಿ ಹಂಗಾಮಿ ಸ್ಪೀಕರ್ ಆಗಿ ಕಾರ್ಯನಿರ್ವಹಿಸುವಂತೆ ಮನವೊಲಿಸಿದ್ದಾರೆ ಎಂದು ತಿಳಿದುಬಂದಿದೆ.

**ಒತ್ತಡವಿಲ್ಲ, ನಿಮ್ಮ ಇಚ್ಛೆಯಿದ್ದರೆ ಜಮೀನು ನೀಡಿ, ಪ್ರತಿ ಎಕರೆಗೆ 3 ಕೋಟಿ ರೂ ಪರಿಹಾರ ನೀಡುತ್ತೇವೆ**

ಬಿಡದಿ ಭೂಸ್ವಾಧೀನ ಪ್ರಕ್ರಿಯೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ, ಮುಂದುವರಿಸುತ್ತಿದ್ದೇವೆ, ರೈತರು ಜಮೀನು ನೀಡುವುದು ಸಂಪೂರ್ಣವಾಗಿ ಐಚ್ಛಿಕವಾಗಿದ್ದು, ಯೋಜನೆಗೆ ಜಮೀನು ನೀಡಲು ಇಷ್ಟವಿಲ್ಲದ ಯಾರ ಮೇಲೆಯೂ ಒತ್ತಡ ಹೇರುವುದಿಲ್ಲ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ಬಿಡದಿ ಟೌನ್‌ಶಿಪ್ ವಿರೋಧಿಸಿ ಜೆಡಿಎಸ್ ಪಾದಯಾತ್ರೆಗೆ ಮುಂದಾದ ಬೆನ್ನಲ್ಲೇ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಈ ಯೋಜನೆಯನ್ನು ಸಮರ್ಥಿಸಿ ಇಂದು ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿದ್ದಾರೆ.

ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಬಿಡದಿ ಟೌನ್‌ಶಿಪ್ ಯೋಜನೆಗೆ ಮರುಜೀವ ನೀಡಲಾಗುತ್ತಿದ್ದು, ಇದನ್ನು ವಿಶ್ವದರ್ಜೆಯ ರಸ್ತೆಗಳು, ಮೆಟ್ರೋ ಸಂಪರ್ಕ, ಅತ್ಯಾಧುನಿಕ ಕ್ರೀಡಾಂಗಣ, ಉದ್ಯಾನವನ ಹಾಗೂ ಸುಸಜ್ಜಿತ ವಸತಿ ಒಳಗೊಂಡ ಅತ್ಯಾಧುನಿಕ ಎಐ ಸಿಟಿಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಡಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಈ ಬೃಹತ್ ಯೋಜನೆ ಬೆಂಗಳೂರು ದಕ್ಷಿಣ ಜಿಲ್ಲೆಯ ಚಿತ್ರಣವನ್ನೇ ಬದಲಿಸಲಿದೆ. ರೈತರ ಹಿತರಕ್ಷಣೆ ನಮ್ಮ ಪ್ರಮುಖ ಆದ್ಯತೆಯಾಗಿದೆ.

## ರಕ್ತಕೇಂದ್ರಗಳ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಗಮನಹರಿಸಲಿ : ಎಸ್ ಮನೋಜ್ ಕುಮಾರ್

• ಉದಯವಾಹಿನಿ, ಬೆಂಗಳೂರು

ಸುವರ್ಣ ಕರ್ನಾಟಕ ಬ್ಲಡ್ ಸೆಂಟರ್ ಅಸೋಸಿಯೇಷನ್‌ನ ಬೋರ್ಡ್ ಮೀಟಿಂಗ್ ಹಾಗೂ ಸಾಮಾನ್ಯ ಸಭೆ ನಗರದ ಸ್ವಾತಿ ಹೋಟೆಲ್‌ನಲ್ಲಿ ನಡೆಯಿತು. ಸಭೆಯಲ್ಲಿ ರಕ್ತಕೇಂದ್ರಗಳ ನಿರ್ವಹಣೆ, ಆರೋಗ್ಯ ಇಲಾಖೆಯ ನಿಯಮಗಳು, ಚಾರಿಟೇಬಲ್ ಹಾಗೂ ಖಾಸಗಿ ರಕ್ತಕೇಂದ್ರಗಳ ಸಮಸ್ಯೆಗಳು, ಮಾನ್ಯತೆ ಮತ್ತು ರಕ್ತ ಸಂಸ್ಕರಣಾ ಶುಲ್ಕ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚಿಸಲಾಯಿತು. ಅಸೋಸಿಯೇಷನ್ ಅಧ್ಯಕ್ಷ ಶ್ರೀ ವಿ.ಎಂ. ಹಿರೇಮಠ ಮಾತನಾಡಿ, ಚಾರಿಟೇಬಲ್ ಟ್ರಸ್ಟ್ ಹಾಗೂ ಖಾಸಗಿ ರಕ್ತಕೇಂದ್ರಗಳ ಮೇಲೆ ಹಲವು ಒತ್ತಡಗಳನ್ನು ಹೇರಲಾಗುತ್ತಿದೆ, ಸರ್ಕಾರ ಕ್ರಮ ಕೈಗೊಂಡು, ರಕ್ತಕೇಂದ್ರಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಕಾರ್ಯದರ್ಶಿ ಮಂಜುನಾಥ ರೆಡ್ಡಿ





ಉದಯವಾಹಿನಿ ಚಿತ್ರ

ಮಾತನಾಡಿ, 2023ರ ಕರ್ನಾಟಕ ರಾಜ್ಯ ರಕ್ತಚಾಲನ ಪರಿಷತ್ ಆದೇಶದಂತೆ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳಲ್ಲಿ ಸಂಗ್ರಹಿಸಿದ ರಕ್ತದಿಂದ ಬೇರ್ಪಡಿಸಿದ ಶೇ.25ರಷ್ಟು ಪಿಆರ್‌ಬಿಸಿ ಘಟಕಗಳನ್ನು ಸರ್ಕಾರಿ ರಕ್ತಕೇಂದ್ರಗಳಿಗೆ ಉಚಿತವಾಗಿ ನೀಡಲಾಗುತ್ತಿದೆ. ಇತ್ತೀಚೆಗೆ ಹೋಲ್ ಬ್ಲಡ್ ನೀಡುವಂತೆ ಕೇಳಲಾಗುತ್ತಿದ್ದು, ಇದು ತಾಂತ್ರಿಕವಾಗಿ ಹಾಗೂ ಬಳಕೆಯ ದೃಷ್ಟಿಯಿಂದ ಸಮಸ್ಯೆಯಾಗಬಹುದು. ಆದ್ದರಿಂದ ಹಿಂದಿನ ಆದೇಶವನ್ನೇ ಮುಂದುವರಿಸಬೇಕು ಎಂದು ಆಗ್ರಹಿಸಿದರು.

ಗೌರವ ಅಧ್ಯಕ್ಷರಾದ ಎಸ್. ಮನೋಜ್ ಕುಮಾರ್ ಮಾತನಾಡಿ, ರಕ್ತಕೇಂದ್ರಗಳಲ್ಲಿ ಅಗತ್ಯ ಮೂಲಸೌಕರ್ಯ, ತಾಂತ್ರಿಕ ಉಪಕರಣಗಳು, ತರಬೇತಿ ಪಡೆದ ಸಿಬ್ಬಂದಿ ಹಾಗೂ ಸುರಕ್ಷತಾ ವ್ಯವಸ್ಥೆ ಇರಬೇಕು. ರಕ್ತ ಸಂಗ್ರಹಣೆ, ಪರೀಕ್ಷೆ, ಸಂಸ್ಕರಣೆ ಮತ್ತು ಸಂರಕ್ಷಣೆಯಲ್ಲಿ ನಿಯಮ-ನೀತಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

ರಕ್ತಕೇಂದ್ರಗಳು ಪರಸ್ಪರ ಸಹೋದರತ್ವ, ಸಹಕಾರ ಮತ್ತು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ವಿವರಿಸಿದರು. ಗಿರೀಶ್ ಬುಡರಕಟ್ಟಿ ಮಾತನಾಡಿ, ರಕ್ತಕೇಂದ್ರಗಳ ಮೂಲಸೌಕರ್ಯ, ಸಿಬ್ಬಂದಿ ಹಾಗೂ ತಾಂತ್ರಿಕ ಸಮಸ್ಯೆಗಳಿಗೆ ಸರ್ಕಾರ ತುರ್ತು ಗಮನ ನೀಡಬೇಕು. ಗ್ರಾಮೀಣ ಮತ್ತು ಅರೆನಗರ ಪ್ರದೇಶಗಳ ರಕ್ತಕೇಂದ್ರಗಳಿಗೆ ಅಗತ್ಯ ನೆರವು ಒದಗಿಸಬೇಕು ಎಂದು ಒತ್ತಾಯಿಸಿದರು.

ರಕ್ತಕೇಂದ್ರಗಳಿಗೆ ಕಡ್ಡಾಯಗೊಳಿಸಿರುವ ಮಾನ್ಯತೆಯನ್ನು ಮರುಪರಿಶೀಲಿಸಿ, ಚಾರಿಟೇಬಲ್ ಹಾಗೂ ಲಾಭರಹಿತ ರಕ್ತಕೇಂದ್ರಗಳಿಗೆ ವಿನಾಯಿತಿ ಅಥವಾ ಸರ್ಕಾರದ ಆರ್ಥಿಕ ನೆರವು ನೀಡಬೇಕು. ಹೆಚ್ಚುತ್ತಿರುವ ಕಾರ್ಯಾಚರಣಾ ವೆಚ್ಚದ ಹಿನ್ನೆಲೆಯಲ್ಲಿ ರಕ್ತ ಸಂಸ್ಕರಣಾ ಶುಲ್ಕವನ್ನು ಪರಿಷ್ಕರಿಸಬೇಕು ಎಂಬ ಬೇಡಿಕೆಯೂ ಸಭೆಯಲ್ಲಿ ವ್ಯಕ್ತವಾಯಿತು.

ಅಧ್ಯಕ್ಷ ವಿ.ಎಂ. ಹಿರೇಮಠ, ಕಾರ್ಯದರ್ಶಿ ಮಂಜುನಾಥ ರೆಡ್ಡಿ ಸೇರಿದಂತೆ ಪದಾಧಿಕಾರಿಗಳು ಹಾಗೂ ಸದಸ್ಯರು ಸಭೆಯಲ್ಲಿ ಭಾಗವಹಿಸಿ ಸಲಹೆ-ಸೂಚನೆಗಳನ್ನು ನೀಡಿದರು.

## ಬಿಡದಿ ಟೌನ್‌ಶಿಪ್ ವಿರೋಧಿಸಿ ಪಾದಯಾತ್ರೆ ಆರಂಭ

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಮಿತ್ರ ಪಕ್ಷಗಳಾದ ಜೆಡಿಎಸ್ ಹಾಗೂ ಬಿಜೆಪಿ ವತಿಯಿಂದ ಬಿಡದಿಯಿಂದ ಬೆಂಗಳೂರಿಗೆ ಪಾದಯಾತ್ರೆ ಆರಂಭಗೊಂಡಿದೆ. ಬಿಡದಿಯ ಬೈರಮಂಗಲದಿಂದ ಇಂದಿನಿಂದ ಮೂರು ದಿನಗಳವರೆಗೆ 38 ಕಿ.ಮೀ. ದೂರದ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ಕಾಂಗ್ರೆಸ್ ಸರ್ಕಾರದ ಉದ್ದೇಶಿತ ಬಿಡದಿ ಟೌನ್‌ಶಿಪ್ ಯೋಜನೆಯನ್ನು ವಿರೋಧಿಸಿ ಇಂದು ಆರಂಭವಾಗಿರುವ ಬೃಹತ್ ಪಾದಯಾತ್ರೆಗೆ ಮುನ್ನ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ.ದೇವೇಗೌಡರ ಆಶೀರ್ವಾದ ಪಡೆದರು. ನಿಖಿಲ್ ಕುಮಾರಸ್ವಾಮಿ ಅವರು ದೇವೇಗೌಡರನ್ನು ಭೇಟಿ ಮಾಡಿ ಪಾದಯಾತ್ರೆಯ ವಿವರಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಪ್ರಧಾನಿ ದೇವೇಗೌಡರು ನಿಖಿಲ್ ಅವರ ತಲೆಯ ಮೇಲೆ ಕೈಯಿಟ್ಟು ಆಶೀರ್ವದಿಸಿದರು.

ರೈತರ ಹಿತಕ್ಕಾಗಿ, ರೈತರ ಭೂಮಿಯನ್ನು ಉಳಿಸಲು ಈ ಹೋರಾಟ ಮಾಡುತ್ತಿದ್ದೀರಿ. ದೃಢವಾಗಿ ನಿಂತು ಹೋರಾಡಿ, ಜನರ ಬೆಂಬಲ ನಿಮ್ಮೊಂದಿಗಿದೆ ಎಂದು ದೇವೇಗೌಡರು ನಿಖಿಲ್ ಕುಮಾರಸ್ವಾಮಿ ಅವರಿಗೆ ಕಿವಿಮಾತು ಹೇಳಿ ಶುಭ ಹಾರೈಸಿದರು.

ಇತ್ತ ಬಿಡದಿ ಟೌನ್‌ಶಿಪ್ ಪಾದಯಾತ್ರೆ ಯಶಸ್ವಿಯಾಗಲೆಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಹೆಚ್ ಡಿ ರೇವಣ್ಣ ಅವರು ಚಾಮುಂಡಿ ಬೆಟ್ಟಕ್ಕೆ ತೆರಳಿ ಚಾಮುಂಡೇಶ್ವರಿ ದರ್ಶನ ಪಡೆದರು. ತಾಯಿಗೆ ವಿಶೇಷ ಪೂಜೆ ಸಲ್ಲಿಸಿ, ಪಾದಯಾತ್ರೆ ಯಶಸ್ಸು ಕೋರಿದರು.

## ಮೆಟ್ರೋ ನಿಲ್ದಾಣದಿಂದ ರಸ್ತೆಗೆ ಬಿದ್ದ ಡೆಡ್ಲಿ ಮೆಟಲ್ ಶೀಟ್

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯ ಹೊರಗಿನ ವರ್ತುಲ ರಸ್ತೆಯಲ್ಲಿ ರಾತ್ರಿ ಮತ್ತೊಂದು ಮೆಟ್ರೋ ಕಾಮಗಾರಿ ಲೋಪ ಬೆಳಕಿಗೆ ಬಂದಿದ್ದು, ಪ್ರಾಣಾಪಾಯದಿಂದ ವಾಹನ ಸವಾರರು ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ.

ಮಾರತ್ತಹಳ್ಳಿ ಸಮೀಪದ ಕಡುಬೀಸನಹಳ್ಳಿ ಬಳಿ ನಿರ್ಮಾಣ ಹಂತದಲ್ಲಿರುವ ನಮ್ಮ ಮೆಟ್ರೋ ನಿಲ್ದಾಣದಿಂದ ಭಾರೀ ಗಾತ್ರದ ಮೆಟಲ್ ಶೀಟ್ ಒಂದು ಚಲಿಸುವ ವಾಹನಗಳ ನಡುವೆಯೇ ರಸ್ತೆಗೆ ಬಿದ್ದಿದೆ.

ಈ ಭೀಕರ ದೃಶ್ಯ ಕಾರೊಂದರ ಡ್ಯಾಶ್‌ಕ್ಯಾಮ್‌ನಲ್ಲಿ ಸೆರೆಯಾಗಿದ್ದು, ಸದ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಆಗಸ್ಟ್ 6 ರಂದು ರಾತ್ರಿ ಸುಮಾರು 9:48 ರ ಸುಮಾರಿಗೆ ಹೊರಗಿನ ವರ್ತುಲ ರಸ್ತೆಯಲ್ಲಿ ವಾಹನ ಸಂಚಾರ ದಟ್ಟವಾಗಿತ್ತು. ಈ ವೇಳೆ ಎತ್ತರಿಸಿದ ಮೆಟ್ರೋ ಮಾರ್ಗದಿಂದ ಸುಮಾರು ಒಂದು ಮೀಟರ್ ಉದ್ದದ ಭಾರೀ ಲೋಹದ ಶೀಟ್ ಏಕಾಏಕಿ ಕೆಳಗೆ ಬಿದ್ದಿದೆ. ಇದು ರಸ್ತೆಯಲ್ಲಿ ಚಲಿಸುತ್ತಿದ್ದ ಎಲೆಕ್ಟ್ರಿಕ್ ಬಸ್ ಮತ್ತು ಕಾರಿನ ಮಧ್ಯದಲ್ಲೇ ಬಿದ್ದಿದೆ.

ಕಾರು ಚಾಲಕ ಸಮಯಪ್ರಜ್ಞೆ ಮೆರೆದು ತಕ್ಷಣ ಬ್ರೇಕ್ ಹಾಕಿದ್ದರಿಂದ ದೊಡ್ಡ ಗಂಡಾಂತರ ತಪ್ಪಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಅಥವಾ ಗಾಯಗಳಾಗಿಲ್ಲ.

ಈ ಘಟನೆಯ ವಿಡಿಯೋ ಹೊರಬರುತ್ತಿದ್ದಂತೆ ಬಿಎಂಆರ್‌ಸಿಎಲ್ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ವೇಳೆ ಈ ಲೋಹದ ತಗಡು ದ್ವಿಚಕ್ರ ವಾಹನ ಸವಾರರು ಅಥವಾ ಪಾದಚಾರಿಗಳ ಮೇಲೆ ಬಿದ್ದಿದ್ದರೆ ಸಾವು-ನೋವು ಸಂಭವಿಸುತ್ತಿತ್ತು ಎಂದು ಸ್ಥಳೀಯರು ಕಳವಳ ವ್ಯಕ್ತಪಡಿಸಿದ್ದಾರೆ.

# ಬೆಂಗಳೂರು ನೀರು ಬಿಕ್ಕಟ್ಟಿಗೆ ಪರಿಹಾರವಿದ್ದರೂ ನಿರ್ಲಕ್ಷ್ಯ?

### ಬೆಂಗಳೂರಿನ ನೀರಿನ ಅಗತ್ಯ ಪೂರೈಸಲು ಮೇಕೆದಾಟು ಯೋಜನೆಯಿಂದ ೪ ಟಿಎಂಸಿ ಅಡಿ ನೀರು ಬೇಕು ಎಂದು ಹೇಳಲಾಗುತ್ತಿದೆ


• ಉದಯವಾಹಿನಿ, ಬೆಂಗಳೂರು

**1** ಟಿಜಿ ಹಳ್ಳಿ ನೀರು ಕುಡಿಯಲು ಯೋಗ್ಯ
**2** ಸುಮಾರು 2.2 ಟಿಎಂಸಿ ಅಡಿ ನೀರು
**3** ಈಗಾಗಲೇ ಪೈಪ್‌ಲೈನ್ ವ್ಯವಸ್ಥೆ ಇದೆ

ರಾಜಧಾನಿ ಬೆಂಗಳೂರಿನಲ್ಲಿ ಕುಡಿಯುವ ನೀರಿನ ಅಗತ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ನಡುವೆಯೇ, ನಗರದ ಸಮೀಪದಲ್ಲೇ ಇರುವ ತಿಪ್ಪಗೊಂಡನಹಳ್ಳಿ (ಟಿಜಿ ಹಳ್ಳಿ) ಜಲಾಶಯದಲ್ಲಿ ಸುಮಾರು 2.2 ಟಿಎಂಸಿ ಅಡಿ ನೀರು ಬಳಕೆಯಾಗದೆ ವ್ಯರ್ಥವಾಗುತ್ತಿದೆ. 1933ರಲ್ಲಿ ನಿರ್ಮಿಸಲಾದ ರಾಜ್ಯದ ಮೊದಲ ಮಾನವ ನಿರ್ಮಿತ ಅಣೆಕಟ್ಟುಗಳಲ್ಲಿ ಒಂದಾದ ಟಿಜಿ ಹಳ್ಳಿ ಜಲಾಶಯ ಮಾಗಡಿ ರಸ್ತೆಯಲ್ಲಿ ಬೆಂಗಳೂರಿನಿಂದ ಸುಮಾರು 35 ಕಿ.ಮೀ ದೂರದಲ್ಲಿದೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧಿಕಾರಿಗಳ ಪ್ರಕಾರ, ಜಲಾಶಯದಲ್ಲಿ 58 ಅಡಿ ಮಟ್ಟದಲ್ಲಿ ಸುಮಾರು 2.2 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಆದರೆ, ಈ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿಲ್ಲ.

ಇತ್ತೀಚೆಗೆ ಸುಮಾರು 230 ಕೋಟಿ ರೂಪಾಯಿ ವೆಚ್ಚದಲ್ಲಿ ದುರಸ್ತಿ ಮಾಡಿ ಮರು ಚಾಲನೆಗೊಳಿಸಿರುವ ನೀರು ಸಂಸ್ಕರಣಾ ವ್ಯವಸ್ಥೆ ಹಾಗೂ ಯಂತ್ರೋಪಕರಣಗಳು ವ್ಯರ್ಥವಾಗದಂತೆ ಸದ್ಯ 4 ಎಂಎಲ್‌ಡಿ ನೀರನ್ನು ಕೆಳಭಾಗದ ಮಂಚನಬೆಲೆ ಜಲಾಶಯ



ಉದಯವಾಹಿನಿ ಚಿತ್ರ

**ತ್ಯಾಜ್ಯ ನೀರು ಉತ್ಪತ್ತಿ**

ಇದರ ಜತೆಗೆ ಬೆಂಗಳೂರಿನಲ್ಲಿ ಪ್ರತಿದಿನ ದೊಡ್ಡ ಪ್ರಮಾಣದಲ್ಲಿ ಸಂಸ್ಕರಿತ ತ್ಯಾಜ್ಯ ನೀರು ಕೂಡ ಉತ್ಪತ್ತಿಯಾಗುತ್ತಿದೆ. ಲಭ್ಯವಿರುವ ಮಳೆನೀರು, ಕಾವೇರಿ ನೀರು ಹಾಗೂ ಸಂಸ್ಕರಿತ ತ್ಯಾಜ್ಯ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ನಗರದ ನೀರಿನ ಅಗತ್ಯವನ್ನು ನಿರ್ವಹಿಸಬಹುದು ಎಂದು ಸಲಹೆ ನೀಡಿದ್ದಾರೆ.

ಮತ್ತು ಮಾಗಡಿ ಗ್ರಾಮಗಳಿಗೆ ಪೂರೈಸಲಾಗುತ್ತಿದೆ. ಉಳಿದ ನೀರು ಜಲಾಶಯದಲ್ಲೇ ಬಳಕೆಯಾಗದೆ ಉಳಿದಿದ್ದು, ಆವಿಯಾಗುವಿಕೆ ಮತ್ತು ಸೋರಿಕೆಯಿಂದಾಗಿ ಪ್ರಮಾಣ ಕಡಿಮೆಯಾಗುತ್ತಿದೆ ಎಂದು ಬಿಡಬ್ಲ್ಯುಎಸ್‌ಎಸ್‌ಬಿ ಇಂಜಿನಿಯರ್‌ರೊಬ್ಬರು ತಿಳಿಸಿದ್ದಾರೆ. ಆದರೆ, ಈ ಭಾಗದಲ್ಲಿ ಅಂತರ್ಜಲ ಮಟ್ಟ ಉತ್ತಮವಾಗಿರುವುದು ಹಾಗೂ ರೈತರಿಗೆ ಇದರಿಂದ ಅನುಕೂಲವಾಗಿರುವುದು ಸದ್ಯದ ಸಕಾರಾತ್ಮಕ ಅಂಶ ಎಂದು ಹೇಳಿದ್ದಾರೆ. ಬೆಂಗಳೂರಿನ ನೀರಿನ ಅಗತ್ಯ ಪೂರೈಸಲು ಮೇಕೆದಾಟು ಯೋಜನೆಯಿಂದ 4 ಟಿಎಂಸಿ ಅಡಿ ನೀರು ಬೇಕು ಎಂದು ಹೇಳಲಾಗುತ್ತಿದ್ದರೂ, ಟಿಜಿ ಹಳ್ಳಿ ಜಲಾಶಯದಲ್ಲಿನ ನೀರನ್ನು ಸಂಪೂರ್ಣವಾಗಿ ಬಳಸಿಕೊಳ್ಳದೆ ಇರುವುದು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

> ಟಿಜಿ ಹಳ್ಳಿ ಜಲಾಶಯದ ನೀರು ಉತ್ತಮ ಗುಣಮಟ್ಟದ್ದಾಗಿದ್ದು, ಸಂಸ್ಕರಣೆ ಬಳಿಕ ಕುಡಿಯಲು ಯೋಗ್ಯವಾಗಿದೆ. ಆದರೂ ಪ್ರತಿದಿನ ಈ ನೀರನ್ನು ನಿರ್ಲಕ್ಷಿಸಿ ವ್ಯರ್ಥ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.-ಬಿಡಬ್ಲ್ಯುಎಸ್‌ಎಸ್‌ಬಿ ಇಂಜಿನಿಯರ್

**ಸರ್ಕಾರ ತಕ್ಷಣ ಕ್ರಮ**

ಬೆಂಗಳೂರಿನ ನೀರಿನ ಬೇಡಿಕೆ ಹೆಚ್ಚುತ್ತಿರುವ ಸಂದರ್ಭದಲ್ಲಿ, ನಗರದ ಸಮೀಪದಲ್ಲೇ ಇರುವ ಟಿಜಿ ಹಳ್ಳಿ ಜಲಾಶಯದಲ್ಲಿನ 2.2 ಟಿಎಂಸಿ ಅಡಿ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಕುರಿತು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕೆಂಬ ಚರ್ಚೆ ಇದೀಗ ಮತ್ತೆ ಮುನ್ನೆಲೆಗೆ ಬಂದಿದೆ.

> ಈ ಹಿನ್ನೆಲೆಯಲ್ಲಿ ಟಿಜಿ ಹಳ್ಳಿ ನೀರನ್ನು ಬಳಸಿಕೊಂಡು ದಬ್ಬಸಪೇಟೆ ಮತ್ತು ಪೀಣ್ಯ ಕೈಗಾರಿಕಾ ಪ್ರದೇಶಗಳಿಗೆ ನೀರು ಪೂರೈಸುವ ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.ಅಧಿಕಾರಿ

# ನನ್ನನ್ನು ಕೊಂಡುಕೊಳ್ಳುವವರು ರಾಜ್ಯದಲ್ಲಿ ಇನ್ನೂ ಹುಟ್ಟಿಲ್ಲ: ಹೆಚ್.ಡಿ. ಕುಮಾರಸ್ವಾಮಿ

• **ಉದಯವಾಹಿನಿ, ಮೈಸೂರು**


ಉದಯವಾಹಿನಿ ಚಿತ್ರ

ನಾನು ಲಾಟರಿ ಬ್ಯಾನ್ ಮಾಡಿದಾಗ ತಮಿಳುನಾಡಿನಿಂದ ಬ್ಯಾಗ್ ಹಿಡ್ಕೊಂಡು ಬಂದಿದ್ದವರನ್ನು ಉಗಿದು ಕಳಿಸಿದೆ. ನನ್ನನ್ನು ಕೊಂಡುಕೊಳ್ಳಲು ಸಾಧ್ಯವಿಲ್ಲ. ನನ್ನ ಕೊಂಡುಕೊಳ್ಳುವವರು ಈ ರಾಜ್ಯದಲ್ಲಿ ಇನ್ನೂ ಹುಟ್ಟಿಲ್ಲ, ನನ್ನ ಧ್ವನಿಯನ್ನೂ ನಿಲ್ಲಿಸಲು ಆಗಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದರು. ಚಾಮುಂಡಿ ಬೆಟ್ಟದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಯೋಜನೆಗಳಿಂದ ದುಡ್ಡು ಹೊಡೆಯುವ ಕೆಲಸ ಮಾಡುತ್ತಿದೆ. ಜನರು ನಂಬುವ ಹಾಗೇ ಜಾಹೀರಾತನ್ನು ಕೊಡಿ. ಬಿಡದಿ ಭೂಮಿ ಫಲವತ್ತಾದ ಭೂಮಿ ಎಂದು ಕಾಂಗ್ರೆಸ್ ಸದನ ಸಮಿತಿ ವರದಿಯಲ್ಲಿ ಎಲ್ಲವೂ ಇದೆ. ಬಿಡದಿ ಪ್ರಾಜೆಕ್ಟ್ ನಿಲ್ಲಿಸುವ ಬಗ್ಗೆ ನಾನೇ ಸದನದಲ್ಲಿ ಹೇಳಿದ್ದೇನೆ. ಈಗ ಬಿಡದಿ ಲೂಟಿ ಹೊಡೆಯಲು ಹೊರಟಿದ್ದಾರೆ. ಇದೇ ಡಿ.ಕೆ.ಶಿವಕುಮಾರ್ ಸದನ ಸಮಿತಿಯಲ್ಲಿ ಇದ್ದರಲ್ಲ... ನಾನು ದಾಖಲೆಗಳನ್ನು ಇಟ್ಟುಕೊಂಡು ಆರೋಪ ಮಾಡಿದ್ದೇನೆ ಎಂದು ಹೇಳಿದರು.

ಬಿಡದಿ ಟೌನ್‌ಶಿಪ್‌ನಲ್ಲಿ ನನಗೆ ಯಾವುದೇ ಹಠ ಬಹುಶಃ ಅವರಿಗೆ ಹಠ ಇರಬೇಕು. ಬಿಡದಿ ಟೌನ್‌ಶಿಪ್ ಹೆಸರಲ್ಲಿ ಲೂಟಿ ಹೊಡೆಯುವ ಸ್ಕೀಮ್ ಇದು. ನಾನು ಕಿಕ್ ಬ್ಯಾಕ್ ಪಡೆದಿದ್ದರೆ ತನಿಖೆ ಮಾಡಲಿ. ನನ್ನನ್ನಾಗಲಿ, ದೇವೇಗೌಡರನ್ನಾಗಲಿ ಕೊಂಡುಕೊಳ್ಳಲು ಸಾಧ್ಯವಿಲ್ಲ. ನಾನು ಲಾಟರಿ ಬ್ಯಾನ್ ಮಾಡಿದಾಗ ತಮಿಳುನಾಡಿನಿಂದ ಬ್ಯಾಗ್ ಹಿಡ್ಕೊಂಡು ಬಂದಿದ್ದು ಯಾರು? ಎಂದು ಕೈ ನಾಯಕರ ಆರೋಪಕ್ಕೆ ಕೇಂದ್ರ ಸಚಿವರು ತಿರುಗೇಟು ನೀಡಿದರು.

ಬಿಡದಿ ಟೌನ್‌ಶಿಪ್ ಯಾವ ಕಾರಣಕ್ಕೂ ಆಗಲ್ಲ. ದುಡ್ಡು ಹೊಡೆಯೋಕೆ ಮುಂದಾಗಿದ್ದಾರೆ. ರೈತರು, ಹೆಣ್ಮಕ್ಕಳು ಭದ್ರವಾಗಿದ್ದರೆ ಬಿಡದಿ ಟೌನ್‌ಶಿಪ್ ಆಗಲ್ಲ. ಕೆಟ್ಟ ಭ್ರಷ್ಟ ಸರ್ಕಾರಕ್ಕೆ ತಿರುಗೇಟು ಕೊಡಲಿಕ್ಕೆ ನಮ್ಮ ಶಾಸಕರು ಸಿದ್ದರಿದ್ದಾರೆ. ವಿಪಕ್ಷಗಳು ಮಾತನಾಡಿದರೆ ಗೌರವ ಕೊಡುತ್ತಿಲ್ಲ. ಅಧಿಕಾರದ ಮದದಿಂದ ವಿಪಕ್ಷಗಳಿಗೆ ಮಾನ್ಯತೆ ಕೊಡುತ್ತಿಲ್ಲ. ಬೀದಿ ಬದಿ ವ್ಯಾಪಾರಸ್ಥರನ್ನು ಎತ್ತಿಸಿದ್ದೀರಿ ಅವರಿಗೆ ಪರ್ಯಾಯ ಮಾರ್ಗ ಕೊಟ್ಟಿದ್ದೀರಾ?. ಕೃಷ್ಣಭೈರೇಗೌಡರು ನಾನು ಖರೀದಿ ಮಾಡಿದ ಜಾಗ ಒತ್ತುವರಿ ಅಂದಿದ್ದಿರಾ?, ಅದಕ್ಕೆ ಎಸ್‌ಐಟಿ ಕೂಡ ರಚನೆ ಮಾಡಿದ್ದಾರೆ. ಒಂದೂವರೆ ವರ್ಷ ಅಧಿಕಾರ ಮಾತ್ರ ಬಾಕಿ ಇರೋದು ಎಂದು ಎಚ್ಚರಿಕೆ ನೀಡಿದರು.

ನೈಸ್ ರೋಡ್ ಟೋಲ್ ಸಂಗ್ರಹ ವಿಚಾರವಾಗಿ ಮಾತನಾಡಿ, ಅಕ್ರಮವಾಗಿ ಟೋಲ್ ಸಂಗ್ರಹ ಮಾಡಲಾಗುತ್ತಿದೆ. ಇದನ್ನು ಹೇಳಿರುವುದು ರಾಜ್ಯ ಸರ್ಕಾರದ ಪರ ವಾದ ಮಂಡಿಸಿರುವ ವಕೀಲರು. ಹೀಗಾಗಿ ನಾನು ರೈತರಿಗೆ ಟೋಲ್ ಕಟ್ಟಬೇಡಿ ಅಂತ ಹೇಳಿದ್ದೀನಿ. ಪ್ರಿಯಾಂಕ್ ಖರ್ಗೆಯವರು ಕಾಂಪಿಟೇಷನ್‌ನಲ್ಲಿ ಮಾತನಾಡುತ್ತಾರೆ. ಟೋಲ್ ಸಂಗ್ರಹ ಮಾಡುತ್ತಿರುವುದು ಕೇಂದ್ರ ಸರ್ಕಾರ ಅಂದಿದ್ದಾರೆ. ಯಾರು ಟೋಲ್ ಸಂಗ್ರಹ ಮಾಡುತ್ತಿದ್ದಾರೆ ಎಂಬುದರ ಬಗ್ಗೆ ಅರಿವಿರಲಿ ಎಂದು ಕಿಡಿಕಾರಿದರು

# ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್-ಬಿಜೆಪಿ ಪಾದಯಾತ್ರೆ ಆರಂಭ

## ನಿಖಿಲ್‌ಕುಮಾರಸ್ವಾಮಿ ನೇತೃತ್ವದಲ್ಲಿ ಪಾದಯಾತ್ರೆ ಆರಂಭವಾಗಿದ್ದು, ಬೆಂಗಳೂರಿನ ಹೊರವಲಯದಲ್ಲಿ ಮುಕ್ತಾಯಗೊಳ್ಳಲಿದೆ.

• **ಉದಯವಾಹಿನಿ**, ರಾಮನಗರ

ಬಿಡದಿ ಟೌನ್‌ಶಿಪ್ ಯೋಜನೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಮಿತ್ರ ಪಕ್ಷಗಳಾದ ಜೆಡಿಎಸ್ ಹಾಗೂ ಬಿಜೆಪಿ ವತಿಯಿಂದ ಬಿಡದಿಯಿಂದ ಬೆಂಗಳೂರಿಗೆ ಪಾದಯಾತ್ರೆ ಆರಂಭಗೊಂಡಿದೆ. ಬಿಡದಿಯ ಬೈರಮಂಗಲದಿಂದ ಮೂರು ದಿನ(ಆ.11)ಗಳವರೆಗೆ 38 ಕಿ.ಮೀ. ದೂರದ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ಟೌನ್‌ಶಿಪ್ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಧರಣಿ ಸ್ಥಳವಾದ ಬೈರಮಂಗಲ ವೃತದಿಂದ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಪಾದಯಾತ್ರೆಗೆ ಚಾಲನೆ ಸಿಕ್ಕಿದೆ. ಇದಕ್ಕೂ ಮುನ್ನ, ನಿಖಿಲ್ ಅವರು ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಅವರ ಆಶೀರ್ವಾದ ಪಡೆದರು. ಪಾದಯಾತ್ರೆ ಚಾಲನೆ ನೀಡುವ ಸಂದರ್ಭದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಪ್ರತಿಪಕ್ಷ ನಾಯಕ ಆರ್.ಅಶೋಕ್ ಸೇರಿದಂತೆ ಇತರರು ಇದ್ದರು.

ಬಳಿಕ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸಮಾವೇಶ ನಡೆಯಲಿದೆ. ಸಮಾರೋಪ ಕಾರ್ಯಕ್ರಮದಲ್ಲಿ ಜೆಡಿಎಸ್ ನಾಯಕರು, ಬೆಂಗಳೂರು ದಕ್ಷಿಣ ಜಿಲ್ಲೆಯ ನಾಲ್ಕೂ ವಿಧಾನಸಭಾ ಕ್ಷೇತ್ರಗಳು, ವಿವಿಧೆಡೆಯಿಂದ ಸುಮಾರು 25 ಸಾವಿರ ಕಾರ್ಯಕರ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ರೈತ ಸಂಘಟನೆಗಳು, ಕನ್ನಡಪರ ಸಂಘಟನೆಗಳು, ಮಹಿಳಾ ಮುಖಂಡರು, ವಿದ್ಯಾರ್ಥಿಗಳು ಸೇರಿದಂತೆ ಸಮಾಜದ ವಿವಿಧ ರಂಗಗಳ ನಾಯಕರು ಪಾದಯಾತ್ರೆಗೆ ಪೂರ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ ಅಶೋಕ್ ಮತ್ತು ಎರಡೂ ಪಕ್ಷಗಳ ನಾಯಕರು ಬೆಂಗಳೂರಿನಲ್ಲಿ ಸಭೆ ಸೇರಿ ಜಂಟಿಯಾಗಿ ಪಾದಯಾತ್ರೆ ಕೈಗೊಳ್ಳುವುದಾಗಿ ಶನಿವಾರ ಘೋಷಿಸಿದ್ದರು. ಈ ಯೋಜನೆಯನ್ನು 'ರಿಯಲ್ ಎಸ್ಟೇಟ್ ಉದ್ಯಮ' ಎಂದು ಟೀಕಿಸಿರುವ ಆರ್.ಅಶೋಕ್, ಎರಡೂ ಪಕ್ಷಗಳು ರಾಜ್ಯ ವಿಧಾನಸಭೆಯ ಮಳೆಗಾಲದ ಅಧಿವೇಶನದಲ್ಲಿ ಬಿಡದಿ ಯೋಜನೆಯನ್ನು ಪ್ರಸ್ತಾಪಿಸುತ್ತೇವೆ ಎಂದು ಹೇಳಿದ್ದಾರೆ. ಪಾದಯಾತ್ರೆಗೂ ಮುನ್ನ ನಿಖಿಲ್ ಕುಮಾರಸ್ವಾಮಿ ಅವರು, ರಾಮನಗರ, ಚನ್ನಪಟ್ಟಣ ಮತ್ತು ವಿವಿಧೆಡೆ ತಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರ ಸಭೆಯನ್ನು ನಡೆಸಿದ್ದಾರೆ.


ಉದಯವಾಹಿನಿ ಚಿತ್ರ

**ಪಾದಯಾತ್ರೆ ಸಾಗುವ ಮಾರ್ಗ**

ಬೈರಮಂಗಲ ವೃತ್ತದಿಂದ ಆರಂಭವಾದ ಪಾದಯಾತ್ರೆ, ಸಂಜೆ ಬಿಡದಿಯ ಸಜ್ಜನ್‌ರಾವ್ ವೃತ್ತ ತಲುಪಲಿದ್ದು, ಅಲ್ಲಿಂದ ಹೆದ್ದಾರಿ ಮುಖಾಂತರ ನೈಸ್ ರೋಡ್ ಜಂಕ್ಷನ್‌ಗೆ ಸೇರಲಿದೆ. ಆಗಸ್ಟ್ 10ರಂದು ಜೆಕೆ ಟೈರ್ ಗೇಟ್ ಹಾಗೂ ನೈಸ್ ರೋಡ್ ಜಂಕ್ಷನ್ ಮೂಲಕ ಪಾದಯಾತ್ರೆ ಮುಂದುವರೆಯಲಿದೆ. ಆಗಸ್ಟ್ 11ರಂದು ಬೆಂಗಳೂರು ನಗರದ ಹೊರವಲಯಕ್ಕೆ ಪಾದಯಾತ್ರೆ ಸಾಗಿ, ಅಂತ್ಯಗೊಳ್ಳಲಿದೆ ಎಂದು ತಿಳಿದುಬಂದಿದೆ.

**ದೆಹಲಿಗೆ ಹಣ ಕೊಡಲು ಈ ಯೋಜನೆ ಬೇಕಾ? ಬಿಡದಿ ಟೌನ್‌ಶಿಪ್ ಬಗ್ಗೆ ಹೆಚ್‌ಡಿಕೆ ಕಿಡಿ**

ದೆಹಲಿಗೆ ಹಣ ಕೊಡಲು ಬಿಡದಿ ಟೌನ್‌ಶಿಪ್ ಯೋಜನೆ ಬೇಕಾ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಿಡದಿ ಟೌನ್ ಶಿಪ್ ಯೋಜನೆ ವಿರೋಧಿಸಿ ದೋಸ್ತಿಗಳು ನಡೆಸುತ್ತಿರುವ ಪಾದಯಾತ್ರೆಗೆ ಬೈರಮಂಗಲ ಗ್ರಾಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಲಾಯಿತು. ಈ ವೇಳೆ ಮಾತನಾಡಿದ ಹೆಚ್‌ಡಿಕೆ, ರೈತರ ಹಿತಕ್ಕಾಗಿ ಜೆಡಿಎಸ್ ಪಾದಯಾತ್ರೆ ನಡೆಸುತ್ತಿದೆ. ಕಳೆದ 515 ದಿನಗಳಿಂದ ರೈತರು ಹೋರಾಟ ಮಾಡುತ್ತಿದ್ದಾರೆ. ಯಾವುದೇ ರೀತಿಯ ಬೆದರಿಕೆಗೆ ಬಗ್ಗದೇ ರೈತರು ಹೋರಾಟ ಮುಂದುವರಿಸಿದ್ದಾರೆ.



# ದ್ರಾಕ್ಷಿ' ಬೆಳೆದ ಉದ್ಯಮಿ: ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮ

• **ಉದಯವಾಹಿನಿ, ಗುಂಡ್ಲುಪೇಟೆ**

ಮಳೆ ಕೊರತೆ ಹಾಗೂ ಅಂತರ್ಜಲ ಕುಸಿತದ ಮಧ್ಯೆಯೂ ತಾಲ್ಲೂಕಿನ ಭೀಮನಮಡು ಗ್ರಾಮದಲ್ಲಿ ಉದ್ಯಮಿಯೊಬ್ಬರು ದ್ರಾಕ್ಷಿ ಬೆಳೆದು ಯಶಸ್ಸು ಸಾಧಿಸಿದ್ದಾರೆ.ತಾಲ್ಲೂಕಿನಲ್ಲಿ ಬಾಳೆ, ಅರಿಸಿನ, ಶುಂಠಿ, ಈರುಳ್ಳಿ, ಬೆಳ್ಳುಳ್ಳಿ ಸಹಿತ ತೋಟಗಾರಿಕಾ ಬೆಳೆಗಳನ್ನು ಹೆಚ್ಚಾಗಿ ಬೆಳೆಯಲಾಗುತ್ತದೆ. ಆದರೆ, ಮೊದಲ ಬಾರಿಗೆ ದ್ರಾಕ್ಷಿ ಬೆಳೆಯಾಗಿದ್ದು ರೈತರು ಅಚ್ಚರಿ ವ್ಯಕ್ತಪಡಿಸಿದ್ದಾರೆ.

ಕೇರಳ ಮೂಲದ ಅಶ್ರಫ್ ಎಂಬುವರು 25 ವರ್ಷಗಳಿಂದ ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ನೆಲೆಸಿದ್ದು 12 ಎಕರೆ ಭೂಮಿಯಲ್ಲಿ ಕೃಷಿ ಮಾಡುತ್ತಿದ್ದಾರೆ. ಕೃಷಿಯಲ್ಲಿ ವಿಭಿನ್ನ ಆಲೋಚನಾ ಕ್ರಮ ಹೊಂದಿರುವ ಅಶ್ರಫ್ ತಮ್ಮ ತೋಟದಲ್ಲಿ ಹಲವು ಬಗೆಯ ಹಣ್ಣಿನ ತಳಿಗಳು, ಹೂವಿನ ಗಿಡಗಳನ್ನು ಬೆಳೆಸಿದ್ದಾರೆ. ಇದರ ಜೊತೆಗೆ ಒಂದು ಎಕರೆ ಪ್ರದೇಶದಲ್ಲಿ ರೆಡ್ ವೈನ್ ತಳಿಯ ದ್ರಾಕ್ಷಿ ಬೆಳೆದು ಎಲ್ಲರ ಹುಬ್ಬೇರಿಸಿದ್ದಾರೆ.

ಕಳೆದ ಮೂರು ವರ್ಷಗಳಿಂದ ಸ್ವಲ್ಪ ಜಾಗದಲ್ಲಿ ಪ್ರಾಯೋಗಿಕವಾಗಿ ದ್ರಾಕ್ಷಿ ಕೃಷಿಯಲ್ಲಿ ತೊಡಗಿಸಿಕೊಂಡು ಅನುಭವ ಪಡೆಯುತ್ತಾ ಯಶಸ್ಸು ಸಾಧಿಸಿದ ಅಶ್ರಫ್ ದ್ರಾಕ್ಷಿ ಬೆಳೆಯನ್ನು 1 ಎಕರೆಗೆ ವಿಸ್ತರಿಸಿದ್ದಾರೆ. ನಿರೀಕ್ಷೆಯಂತೆ ಉತ್ತಮ ಫಸಲು ಬಂದಿದ್ದು ಲಾಭ ನಿರೀಕ್ಷೆಯಲ್ಲಿದ್ದಾರೆ.ಗುಂಡ್ಲುಪೇಟೆಯಲ್ಲಿ ಮೊದಲ ಬಾರಿಗೆ ದ್ರಾಕ್ಷಿ ಬೆಳೆದಿರುವ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಹರಡುತ್ತಿದ್ದಂತೆ ಪ್ರವಾಸಿಗರು, ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ದ್ರಾಕ್ಷಿ ಬೆಳೆ ವೀಕ್ಷಣೆಗೆ ಬರುತ್ತಿದ್ದಾರೆ. ದ್ರಾಕ್ಷಿ ಹಾಕುವ ಮುನ್ನ ಬೆಂಗಳೂರಿನಲ್ಲಿರುವ ಸ್ನೇಹಿತರ ನೆರವು ಮಾರ್ಗದರ್ಶನ ಪಡೆದು ದ್ರಾಕ್ಷಿ ಬೆಳೆಯ ಬಿತ್ತನೆ ನಿರ್ವಹಣೆ ಮಾಡಲಾಗಿತ್ತು. ನಿರೀಕ್ಷೆಯಂತೆ ಫಸಲು ಬಂದಿದ್ದು ಮುಂದಿನ ತಿಂಗಳು ಕಟಾವಿಗೆ ಬರಲಿದೆ, ಆದಾಯವೂ ಕೈಸೇರುವ ವಿಶ್ವಾಸ ಇದೆ ಎನ್ನುತ್ತಾರೆ ಅಶ್ರಫ್. ರಾಷ್ಟ್ರೀಯ ಹೆದ್ದಾರಿ ಬಳಿಯೇ ದ್ರಾಕ್ಷಿ ತೋಟ ಇರುವುದರಿಂದ ದಾರಿಯಲ್ಲಿ ಸಾಗುವವರ ಆಕರ್ಷಣೆಯ ಕೇಂದ್ರಬಿಂದುವಾಗಿದೆ. ಕೇರಳ ಹಾಗೂ ತಮಿಳುನಾಡು ಮಾರ್ಗವಾಗಿ ಸಾಗುವವರು ರಸ್ತೆ ಬದಿ ವಾಹನಗಳನ್ನು ನಿಲ್ಲಿಸಿ ಕುಟುಂಬ ಸಮೇತ ಬಹಳಷ್ಟು ಮಂದಿ ತೋಟ ವೀಕ್ಷಣೆಗೆ ಬರುತ್ತಿದ್ದು ಫೋಟೊ ಕ್ಲಿಕ್ಕಿಸಿಕೊಂಡು ಸಂಭ್ರಮಿಸುತ್ತಿದ್ದಾರೆ.

# ಕಾರ್ಪೊರೇಟ್‌ಗಳೇ ದೇಶ ಬಿಟ್ಟು ತೊಲಗಿ' ಘೋಷಣೆ: ಆ.10ರಂದು ಚಿಕ್ಕಬಳ್ಳಾಪುರದಲ್ಲಿ ಜೈಲ್ ಭರೋ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರೈತರು, ಕಾರ್ಮಿಕರು, ಕೃಷಿ ಕೂಲಿಕಾರರು, ದಲಿತರು, ಮಹಿಳೆಯರು ಹಾಗೂ ವಿದ್ಯಾರ್ಥಿ-ಯುವಜನರ ಬದುಕಿಗೆ ಧಕ್ಕೆ ತರುವ ಸರ್ಕಾರಗಳ ನೀತಿಗಳನ್ನು ವಿರೋಧಿಸಿ, 'ಕಾರ್ಪೊರೇಟ್‌ಗಳೇ ದೇಶ ಬಿಟ್ಟು ತೊಲಗಿ' ಘೋಷಣೆಯೊಂದಿಗೆ ಆ.10ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಎದುರು ಬೃಹತ್ ಪ್ರತಿಭಟನೆ ಹಾಗೂ ಜೈಲ್ ಭರೋ ಹೋರಾಟ ನಡೆಸಲಾಗುವುದು ಎಂದು ಕರ್ನಾಟಕ ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಎಂ.ಪಿ.ಮುನಿವೆಂಕಟಪ್ಪ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರು, ಕಾರ್ಮಿಕರು ಹಾಗೂ ದುಡಿಯುವ ವರ್ಗದ ಹಿತಾಸಕ್ತಿಗೆ ವಿರುದ್ಧವಾದ ನೀತಿಗಳನ್ನು ಜಾರಿಗೊಳಿಸುತ್ತಿವೆ ಎಂದು ಆರೋಪಿಸಿದರು. ರೈತರ ಭೂಮಿಯನ್ನು ದೇಶೀಯ ಹಾಗೂ ವಿದೇಶಿ ಕಾರ್ಪೊರೇಟ್ ಕಂಪನಿಗಳಿಗೆ ಒಪ್ಪಿಸುವ ಪ್ರಯತ್ನ ನಡೆಯುತ್ತಿದ್ದು, ಮತ್ತೊಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆ, ನಿರುದ್ಯೋಗ, ಸಾಲ ಹಾಗೂ ಬಡತನದಿಂದ ಜನತೆ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು.

ಇಂಡಿಯಾ ಚಳವಳಿಯ ಸ್ಫೂರ್ತಿಯಿಂದ 'ಕಾರ್ಪೊರೇಟ್‌ಗಳೇ ದೇಶ ಬಿಟ್ಟು ತೊಲಗಿ' ಎಂಬ ಘೋಷಣೆಯಡಿ ದೇಶದಾದ್ಯಂತ ಹೋರಾಟಕ್ಕೆ ಕರೆ ನೀಡಲಾಗಿದೆ.

ಅದರ ಭಾಗವಾಗಿ ಚಿಕ್ಕಬಳ್ಳಾಪುರದಲ್ಲಿ ನಡೆಯುವ ಜೈಲ್ ಭರೋ ಹೋರಾಟಕ್ಕೆ ಸಾವಿರಾರು ರೈತರು, ಕಾರ್ಮಿಕರು, ಕೃಷಿ ಕೂಲಿಕಾರರು, ದಲಿತರು, ಮಹಿಳೆಯರು ಹಾಗೂ ಯುವಜನರು ಭಾಗವಹಿಸಿ ಯಶಸ್ವಿಗೊಳಿಸ ಬೇಕು ಎಂದು ಮನವಿ ಮಾಡಿದರು. ಕನಿಷ್ಠ ಕೂಲಿ ಕಡಿತದ ಪ್ರಸ್ತಾವನೆ, ವಿಬಿ ಗ್ರಾಮ್ ಜಿ ಕಾಯ್ದೆ, ವಿದ್ಯುತ್ ತಿದ್ದುಪಡಿ ಕಾಯ್ದೆ, ಬೀಜ ಕಾಯ್ದೆ, ಕೃಷಿ ಮಾರುಕಟ್ಟೆ ಕುರಿತ ರಾಷ್ಟ್ರೀಯ ಧೋರಣಾ ಚೌಕಟ್ಟು ಹಾಗೂ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ರದ್ದುಪಡಿಸಬೇಕು.

ಸ್ವಾಮಿನಾಥನ್ ಶಿಫಾರಸಿನಂತೆ ಕೃಷಿ ಉತ್ಪನ್ನಗಳಿಗೆ ಶಾಸನ ಬದ್ಧ ಕನಿಷ್ಠ ಬೆಂಬಲ ಬೆಲೆ ನೀಡಬೇಕು.

ರೈತರು, ಕೃಷಿ ಕೂಲಿಕಾರರು ಹಾಗೂ ಮಹಿಳೆಯರ ಸಾಲ ಮನ್ನಾ ಮಾಡಿ ಋಣಮುಕ್ತ ಕಾಯ್ದೆ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

# ಮಕ್ಕಳಿಗೆ ಬಾಲ್ಯದಿಂದಲೇ ಧಾರ್ಮಿಕ ಸಂಸ್ಕಾರ ಕಲಿಸಿ: ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ

• **ಉದಯವಾಹಿನಿ, ಮಧುಗಿರಿ**


ಉದಯವಾಹಿನಿ ಚಿತ್ರ

ಪಟ್ಟಣದ ದೊಡ್ಡಪೇಟೆಯಲ್ಲಿರುವ ಐತಿಹಾಸಿಕ ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನದ ಆವರಣದಲ್ಲಿ ಆರ್ಯವೈಶ್ಯ ಮಂಡಳಿ ಹಾಗೂ ಅದರ ಸಮಸ್ತ ಅಂಗಸಂಸ್ಥೆಗಳ ಜಂಟಿ ಆಶ್ರಯದಲ್ಲಿ ಆಷಾಢ ಮಾಸದ ಕೊನೆಯ ಶುಕ್ರವಾರದ ಪಾವನ ಸಂದರ್ಭದಲ್ಲಿ ಧಾರ್ಮಿಕ ಪೂಜಾ ಮಹೋತ್ಸವ, ಪ್ರಕಾರೋತ್ಸವ, ಜನಾಂಗೀಯ ನೂತನ ಧ್ವಜ ಬಿಡುಗಡೆ ಹಾಗೂ ಧರ್ಮ ಸಭೆಯನ್ನು ಅತ್ಯಂತ ಶ್ರದ್ಧಾ-ಭಕ್ತಿಯಿಂದ ಆಯೋಜಿಸಲಾಗಿತ್ತು. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಕ್ಷೇತ್ರ ಸಿದ್ಧರಬೆಟ್ಟದ ಶ್ರೀ ರಂಭಾಪುರಿ ಖಾಸಾ ಶಾಖಾ ಮಠದ ಮಠಾಧ್ಯಕ್ಷರಾದ ಷ ಬ್ರಹ್ಮ ಶ್ರೀ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಅವರು, ಕರ್ನಾಟಕ ಆರ್ಯವೈಶ್ಯ ಜನಾಂಗದ ನೂತನವಾಗಿ ಲಾಂಛನಗೊಂಡಿರುವ ಧ್ವಜವನ್ನು ಬಿಡುಗಡೆಗೊಳಿಸಿ ಸಮಾಜಕ್ಕೆ ಶುಭ ಹಾರೈಸಿದರು. ಸಭೆಯನ್ನುದ್ದೇಶಿಸಿ ಆಶೀರ್ವಚನ ನೀಡಿದ ಶ್ರೀಕ್ಷೇತ್ರ ಸಿದ್ಧರಬೆಟ್ಟದ ಶ್ರೀ ರಂಭಾಪುರಿ ಖಾಸಾ ಶಾಖಾ ಮಠದ ಮಠಾಧ್ಯಕ್ಷರಾದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಜನಸಾಮಾನ್ಯರಲ್ಲಿ ಆಷಾಢ ಮಾಸವೆಂದರೆ ಕಾರ್ಯಕ್ರಮಗಳನ್ನು ಮಾಡಬಾರದು, ಇದು ಅಶುಭ ಎನ್ನುವ ತಪ್ಪು ಕಲ್ಪನೆ ವ್ಯಾಪಕವಾಗಿದೆ. ಆದರೆ ಸನಾತನ ಧರ್ಮದ ಹಿನ್ನೆಲೆಯಲ್ಲಿ ಆಷಾಢ ಮಾಸವು ಅಶುಭ ಅಲ್ಲ. ಲೌಕಿಕ ಸಂಸಾರಿಕ ಸಂಭ್ರಮಗಳು, ಮದುವೆ-ಮುಂಜಿಗಳ ಹಮ್ಮುಗೆಯಿಂದ ದೂರವಿದ್ದು, ಪ್ರತಿಯೊಬ್ಬ ಮನುಷ್ಯನೂ ದೇವತಾರಾಧನೆ, ಜಪ-ತಪ, ವ್ರತ ಮತ್ತು ಗುರು ಅನುಗ್ರಹವನ್ನು ಪಡೆಯಲು ಈ ಮಾಸ ಮೀಸಲಾಗಿದೆ.

# ಬೆಳೆ ವಿಮೆಗೆ ಹೆಚ್ಚಿದ ಬೇಡಿಕೆ: 2 ವರ್ಷಗಳಿಗಿಂತ ಮೂರು ಪಟ್ಟು ಅಧಿಕ ರೈತರು ನೋಂದಣಿ

• **ಉದಯವಾಹಿನಿ, ಕೋಲಾರ**


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಮಳೆಯ ತೀವ್ರ ಕೊರತೆಯಿಂದ ಬೆಳೆ ಒಣಗುತ್ತಿದೆ, ಇನ್ನು ಕೆಲವೆಡೆ ಬಿತ್ತನೆ ಮಾಡಿದ ಬೀಜ ಮೊಳಕೆಯೂ ಒಡೆದಿಲ್ಲ. ಹೀಗಾಗಿ, ರೈತರು ಆತಂಕಕ್ಕೆ ಒಳಗಾಗಿದ್ದು, ಬೆಳೆ ವಿಮೆ ಮಾಡಿಸಿಕೊಳ್ಳಲು ಮುಗಿಬಿದ್ದಿದ್ದಾರೆ. ಈ ಸಾಲಿನಲ್ಲಿ ಬೆಳೆ ವಿಮೆ ಮಾಡಿಸಿಕೊಳ್ಳಲು ಇನ್ನೂ ಏಳು ದಿನ (ಆ.14) ಕಾಲಾವಕಾಶ ಇದ್ದು, ಈಗಾಗಲೇ ಜಿಲ್ಲೆಯ 32,282 ರೈತರು ನೋಂದಣಿ ಮಾಡಿಸಿಕೊಂಡಿದ್ದಾರೆ. ಕಳೆದ ವರ್ಷ ಕೇವಲ 9,288 ಮಂದಿ ನೋಂದಣಿ ಮಾಡಿಕೊಂಡಿದ್ದರು. ಈ ಬಾರಿ ರಾಗಿ ಬೆಳೆಗಾರರು (28,632) ಅತಿ ಹೆಚ್ಚಿನ ಸಂಖ್ಯೆಯಲ್ಲಿ ಬೆಳೆ ವಿಮೆ ಮೊರೆ ಹೋಗಿದ್ದಾರೆ.ಮುಂಗಾರು ಹಂಗಾಮು ಅವಧಿಯಲ್ಲಿ ಅಂದರೆ ಜೂನ್, ಜುಲೈ ಹಾಗೂ ಈ ತಿಂಗಳು ಇಲ್ಲಿಯವರೆಗೆ ಮಳೆ ಕೊರತೆ ಉಂಟಾಗಿದ್ದು, ಬಿತ್ತನೆಗೆ ತೀವ್ರ ಹಿನ್ನಡೆಯಾಗಿ ಪರಿಣಮಿಸಿದೆ. ಒಟ್ಟು 85,801 ಹೆಕ್ಟೇರ್ ವಿಸ್ತೀರ್ಣದ ಕೃಷಿ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಈ ವರೆಗೆ ಕೇವಲ 4,147 ಹೆಕ್ಟೇರ್ (ಶೇ 4.83) ಬಿತ್ತನೆಯಾಗಿದ್ದು, ಕೃಷಿಯನ್ನೇ ನಂಬಿ ಜೀವನ ಸಾಗಿಸುತ್ತಿರುವ ಅನ್ನದಾತರು ತಲೆ ಮೇಲೆ ಕೈಹೊತ್ತು ಕುಳಿತಿದ್ದಾರೆ.ಒಂದೆರಡು ದಿನ ಚದುರಿದಂತೆ ಮಳೆ ಬಂದಾಗ ಕೆಲವರು ಆಸೆಯಿಂದ ರಾಗಿ ಬಿತ್ತನೆ ಮಾಡಿದ್ದರು. ಆದರೆ, ಅದೀಗ ಮೊಳಕೆಯೂ ಬಾರದೆ ಆರ್ಥಿಕ ನಷ್ಟಕ್ಕೆ ಒಳಗಾಗಿದ್ದಾರೆ.

ಬಿತ್ತನೆಯಾದ ಪ್ರದೇಶದಲ್ಲಿ ಮಳೆ ಕೊರತೆ ಕಾರಣ ಬಹುಪಾಲು ಬೀಜ ಮೊಳಕೆಯಾಗಿಲ್ಲ. ಮೊಳಕೆ ಒಡೆದಿರುವುದು ದೀರ್ಘಕಾಲದ ತೇವಾಂಶ ಕೊರತೆಯಿಂದ ಒಣಗಲಾರಂಭಿಸಿದೆ. ಹಿಂದೆ ಇಂಥ

> **ಮಳೆ ಕೊರತೆ ಕಾರಣ ಬೆಳೆಗಳು ಒಣಗುತ್ತಿವೆ. ಈ ಕಾರಣಕ್ಕಾಗಿ ಹಿಂದಿನ ಎರಡು ವರ್ಷಗಳಿಗಿಂತ ಮೂರು ಪಟ್ಟು ಹೆಚ್ಚು ರೈತರು ಬೆಳೆ ವಿಮೆಗೆ ಹೆಸರು ನೋಂದಾಯಿಸಿದ್ದಾರೆ. -ಎಂ.ಎನ್.ಮಂಜುಳಾ**

ಪರಿಸ್ಥಿತಿ ಎದುರಾದಾಗ ರೈತರು ಆರ್ಥಿಕ ನಷ್ಟಕ್ಕೆ ಒಳಗಾಗಿದ್ದರು. ಹೀಗಾಗಿ, ಈ ಬಾರಿ ಬೆಳೆ ವಿಮೆ ಮೊರೆ ಹೋಗುತ್ತಿದ್ದು, ದಾಖಲೆ ಸಂಖ್ಯೆಯಲ್ಲಿ ನೋಂದಣಿ ಮಾಡಿಸಿಕೊಂಡಿದ್ದಾರೆ. ನಾವು ಕೂಡ ಹೆಚ್ಚಿನ ಜಾಗೃತಿ ಕಾರ್ಯಕ್ರಮ ನಡೆಸುತ್ತಿದ್ದೇವೆ' ಎಂದು ಜಂಟಿ ಕೃಷಿ ನಿರ್ದೇಶಕಿ ಎಂ.ಎನ್.ಮಂಜುಳಾ ತಿಳಿಸಿದರು.

ಮುಂಗಾರು ಅವಧಿಯಲ್ಲಿ ಅಂದರೆ ಜೂನ್ 1ರಿಂದ ಆ.7ರವರೆಗೆ ಜಿಲ್ಲೆಯಲ್ಲಿ 86 ಮಿ.ಮೀ. ಮಳೆ ಆಗಿದೆ. ಈ ಸಂದರ್ಭದಲ್ಲಿ ವಾಡಿಕೆ ಮಳೆ 164 ಮಿ.ಮೀ ಆಗಬೇಕಿತ್ತು. ಶೇ 47 ರಷ್ಟು ಕೊರತೆ ಆಗಿದೆ. ಅದರಲ್ಲೂ ಜುಲೈನಲ್ಲಿ ಶೇ 81ರಷ್ಟು ಮಳೆ ಕೊರತೆ ಉಂಟಾಗಿತ್ತು.ಜಿಲ್ಲೆಯ ಪ್ರಮುಖ ಬೆಳೆಯಾಗಿರುವ ರಾಗಿಯನ್ನು ಈ ಬಾರಿ ಒಟ್ಟು 61 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲು ಗುರಿ ಇಟ್ಟುಕೊಳ್ಳಲಾಗಿದೆ. ಈವರೆಗೆ ಕೇವಲ 831 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಎರಡೂವರೆ ಎಕರೆಯಲ್ಲಿ ರಾಗಿ ಬಿತ್ತನೆ ಮಾಡಿದ್ದು, ಎಕರೆಗೆ 404ರಂತೆ 1,010 ನೀಡಿ ಬೆಳೆ ವಿಮೆ ಮಾಡಿಸಿಕೊಂಡಿದ್ದೇನೆ. ಇಷ್ಟು ಹೊತ್ತಿಗೆ ರಾಗಿ ಬೆಳೆ ಎರಡು ಅಡಿ ಎತ್ತರ ಬೆಳೆದಿರಬೇಕಿತ್ತು. ಆದರೆ, ಮಳೆ ಇಲ್ಲದೆ ಮೊಳಕೆಯಲ್ಲಿಯೇ ಒಣಗುತ್ತಿದೆ. ಇದೇ ರೀತಿ ಮಳೆ ಕೈಕೊಟ್ಟರೆ ಮುಂದೆ ತುಂಬಾ ಕಷ್ಟವಾಗಲಿದೆ. ನಮಗೆ ಮುದ್ದೆ ಸಿಗಲ್ಲ; ಜಾನುವಾರುಗಳಿಗೆ ಮೇವು ಸಿಗಲ್ಲ' ಎಂದು ತೊಟ್ಲಿ ಗ್ರಾಮದ ರೈತ ರಮೇಶ್ ಆತಂಕ ವ್ಯಕ್ತಪಡಿಸಿದ್ದಾರೆ.ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ರಾಗಿ (ನೀರಾವರಿ), ರಾಗಿ (ಮಳೆ ಆಶ್ರಿತ) ಹಾಗೂ ಭತ್ತದ ಬೆಳೆ ವಿಮೆಗೆ ಆ.14ರ ವರೆಗೆ ನೋಂದಣಿಗೆ ಅವಕಾಶವಿದೆ. ರೈತರು ಮಳೆ ಆಶ್ರಿತ ರಾಗಿ ಬೆಳೆಗೆ ವಿಮೆ ಮಾಡಿಸಲು ಹೆಚ್ಚು ಒಲವು ತೋರುತ್ತಿದ್ದಾರೆ.

# ಪಾರಂಪರಿಕ ಕಟ್ಟಡಕ್ಕೆ ಬೇಕು ಕಾಯಕಲ್ಪ

## ಅವಸಾನದ ಅಂಚಿನಲ್ಲಿ ಶಿಡ್ಲಘಟ್ಟ ಕಂದಾಯ ಭವನ

## ಅಗತ್ಯ ದುರಸ್ತಿ ಕಾರ್ಯಗಳನ್ನು ತಕ್ಷಣ ಕೈಗೊಳ್ಳಬೇಕು

• **ಉದಯವಾಹಿನಿ, ಶಿಡ್ಲಘಟ್ಟ**

ನಗರದ ಹೃದಯಭಾಗದಲ್ಲಿರುವ, ಸ್ವಾತಂತ್ರ್ಯ ಹೋರಾಟದ ಇತಿಹಾಸ ಹೊತ್ತ ಪಾರಂಪರಿಕ ಕಟ್ಟಡ ಕಂದಾಯ ಭವನ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಸಂಪೂರ್ಣ ಶಿಥಿಲಾವಸ್ಥೆ ತಲುಪಿದೆ. 1917ರಲ್ಲಿ ನಿರ್ಮಾಣಗೊಂಡ ಈ ಕಟ್ಟಡ ಆರಂಭದಲ್ಲಿ ಬ್ರಿಟೀಷರ ತಾಲ್ಲೂಕು ಆಡಳಿತ ಕಚೇರಿಯಾಗಿತ್ತು. ಸ್ವಾತಂತ್ರ್ಯ ಹೋರಾಟದ ಕಾಲದಲ್ಲಿ ನಡೆದ ಧ್ವಜ ಸತ್ಯಾಗ್ರಹ ಹೋರಾಟಕ್ಕೂ ಈ ಕಟ್ಟಡ ಸಾಕ್ಷಿಯಾಗಿತ್ತು. ಆ ಹೋರಾಟದಲ್ಲಿ ಭಕ್ತರಹಳ್ಳಿಯ ಇಬ್ಬರು ಸ್ವಾತಂತ್ರ್ಯ ಹೋರಾಟಗಾರರು ಪ್ರಾಣ ತೆತ್ತಿದ್ದರು.

ಸ್ವಾತಂತ್ರ್ಯಾನಂತರ ಇದೇ ಕಟ್ಟಡದ ಒಂದು ಭಾಗದಲ್ಲಿ ಪೊಲೀಸ್ ಠಾಣೆ, ಇನ್ನೊಂದು ಭಾಗದಲ್ಲಿ ತಾಲ್ಲೂಕು ಕಚೇರಿ ಕಾರ್ಯನಿರ್ವಹಿಸುತ್ತಿತ್ತು. ಕ್ರಮೇಣ ಪೊಲೀಸ್ ಠಾಣೆ ಹೊಸ ಕಟ್ಟಡಕ್ಕೆ, ಮಿನಿ ವಿಧಾನಸೌಧ ನಿರ್ಮಾಣಗೊಂಡ ಬಳಿಕ ತಾಲ್ಲೂಕು ಆಡಳಿತ ಕಚೇರಿ ಅಲ್ಲಿಗೆ ಸ್ಥಳಾಂತರಗೊಂಡಿತು. ನಂತರ ನ್ಯಾಯಾಲಯಕ್ಕೆ ಬಳಕೆಯಾಗುತ್ತಿತ್ತು. ನ್ಯಾಯಾಲಯವೂ ಹೊಸ ಕಟ್ಟಡಕ್ಕೆ ಸ್ಥಳಾಂತರಗೊಂಡ ಬಳಿಕ ಪ್ರಸ್ತುತ ಇದು ಕಂದಾಯ ಭವನವಾಗಿ ಬಳಕೆಯಾಗುತ್ತಿದೆ. ತಾಲ್ಲೂಕಿನ ನಾಲ್ಕು ಹೋಬಳಿಗಳ ರಾಜಸ್ವ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

**ಗೋಡೆ ಬಿರುಕು:** ಹಲವು ವರ್ಷಗಳಿಂದ ಸಮರ್ಪಕ ನಿರ್ವಹಣೆ ಹಾಗೂ ದುರಸ್ತಿ ಕೈಗೊಳ್ಳದ ಪರಿಣಾಮ ಕಟ್ಟಡ ತನ್ನ ಮೂಲ ಸ್ವರೂಪವನ್ನೇ ಕಳೆದುಕೊಂಡಿವೆ. ಗೋಡೆಗಳು ಬಿರುಕು ಬಿಟ್ಟಿದ್ದು, ಚಾವಣಿ ಕುಸಿಯುವ ಹಂತಕ್ಕೆ ತಲುಪಿದೆ. ಇತ್ತೀಚಿನ ಮಳೆಗೆ ಚಾವಣಿ ಕುಸಿಯುವ ಆತಂಕ ಎದುರಾಗಿದ್ದು, ಕಂದಾಯ ಇಲಾಖೆ ಸಿಬ್ಬಂದಿ ಮುನ್ನೆಚ್ಚರಿಕಾ ಕ್ರಮವಾಗಿ ನೀಲಗಿರಿ ಮರದ ಕೋಲುಗಳನ್ನೇ ತಾತ್ಕಾಲಿಕ ಆಸರೆಯಾಗಿ ಬಳಸಿ ಚಾವಣಿಗೆ ಆಧಾರ ನೀಡಿದ್ದಾರೆ. ಕಟ್ಟಡದ ಕಿಟಕಿ-ಬಾಗಿಲುಗಳು ಹಾಳಾಗಿವೆ.

ಈ ಕಟ್ಟಡ ಶತಮಾನೋತ್ಸವ ಸಂದರ್ಭದಲ್ಲಿ ನವೀಕರಣಗೊಂಡ ಭವನವನ್ನು ಮತ್ತೊಮ್ಮೆ ಜನಾರ್ಪಣೆಗೊಳಿಸಲಾಗಿತ್ತು. ನಂತರ ನಿರ್ವಹಣೆ ಕೊರತೆಯಿಂದ ಕಟ್ಟಡ ಮತ್ತೆ ಅದೇ ಶಿಥಿಲ ಸ್ಥಿತಿಗೆ ಮರಳಿದೆ. ಯಾವುದೇ ಅನಾಹುತ ಸಂಭವಿಸುವ ಮುನ್ನ ಕಟ್ಟಡದ ಸುರಕ್ಷತೆ ಪರಿಶೀಲಿಸಿ, ಅಗತ್ಯ ದುರಸ್ತಿ ಕಾರ್ಯಗಳನ್ನು ತಕ್ಷಣ ಕೈಗೊಳ್ಳಬೇಕು' ಎಂದು ಸ್ಥಳೀಯರಾದ ಭರತ್ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

ರೈತಸಂಘದ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ 'ವಿದುರಾಶ್ವತದಲ್ಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ಹುತಾತ್ಮರ ಸವಿನೆನಪಿಗಾಗಿ ಸ್ಮಾರಕ ನಿರ್ಮಿಸಲಾಗಿದೆ. ಆದರೆ ತಾಲ್ಲೂಕಿನಲ್ಲಿ ಹುತಾತ್ಮರಾದ ಭಕ್ತರಹಳ್ಳಿ ಗ್ರಾಮದ ಸ್ವಾತಂತ್ರ್ಯ ಹೋರಾಟಗಾರರ ನೆನಪಿಗಾಗಿ ಕನಿಷ್ಠ ಕಂದಾಯ ಭವನವನ್ನು ಸೂಕ್ತ ನಿರ್ವಹಣೆ ಮಾಡಿಕೊಂಡು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಆಸಕ್ತಿ ವಹಿಸದಿರುವುದು ದುರಂತ' ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

**ದುರಂತ ಎಂದು ಬೇಸರ**

> **ಆವರಣದ ಸುತ್ತಮುತ್ತ ನಿರುಪಯುಕ್ತ ವಸ್ತುಗಳ ರಾಶಿ ಬಿದ್ದಿದ್ದು, ಕಸ ಮತ್ತು ಗಿಡಗಂಟಿ ಆವರಿಸಿಕೊಂಡಿವೆ. ಸಾರ್ವಜನಿಕ ಕಚೇರಿಗೆ ಇರಬೇಕಾದ ಕನಿಷ್ಠ ಸ್ವಚ್ಛತೆಯೂ ಇಲ್ಲದಂತಾಗಿದ್ದು, ಕಚೇರಿಗೆ ಬರುವ ನಾಗರಿಕರು ಮತ್ತು ಸಿಬ್ಬಂದಿ ತೊಂದರೆ ಅನುಭವಿಸುವಂತಾಗಿದೆ.**

## ಮಿನಿ ನ್ಯೂಸ್

# ಗೋಪಾಲಸ್ವಾಮಿ ಬೆಟ್ಟದಲ್ಲಿ ಭಕ್ತರ ದಂಡು

• **ಉದಯವಾಹಿನಿ, ಗುಂಡ್ಲುಪೇಟೆ**



ವಾರಾಂತ್ಯದ ರಜೆ ಹಿನ್ನೆಲೆ ಇತಿಹಾಸ ಪ್ರಸಿದ್ಧ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಭಕ್ತರ ದಂಡೇ ಹರಿದುಬಂದಿತು.

ಶ್ರೀಕೃಷ್ಣನ ದರ್ಶನಕ್ಕಾಗಿ ಬೆಳಗ್ಗೆಯಿಂದಲೇ ಭಕ್ತರು ಸರತಿ ಸಾಲಿನಲ್ಲಿ ನಿಂತಿದ್ದು, ಬೆಟ್ಟದ ಪ್ರವೇಶ ದ್ವಾರದ ಬಳಿ ಮಾರುದ್ದ ಸಾಲು ಕಂಡುಬಂತು. ಭಕ್ತರ ಸಂಖ್ಯೆ ಹೆಚ್ಚಾದ ಹಿನ್ನೆಲೆ ಅವರನ್ನು ನಿಯಂತ್ರಿಸಲು ಅರಣ್ಯ ಇಲಾಖೆ ಸಿಬ್ಬಂದಿ ಹರಸಾಹಸಪಟ್ಟರು. ಸಾವಿರಾರು ಭಕ್ತರು ಟಿಕೆಟ್‌ಗಾಗಿ ಸರತಿ ಸಾಲಿನಲ್ಲಿ ನಿಂತು ದರ್ಶನ ಪಡೆದರು. ವೇಳೆ ಕೆಎಸ್‌ಆರ್‌ಟಿಸಿ ಬಸ್‌ಗಳು ವಿರಳವಾಗಿದ್ದರಿಂದ ಬೆಟ್ಟಕ್ಕೆ ತೆರಳಲು ಭಕ್ತರಿಗೆ ವಿಳಂಬವಾಯಿತು ಎಂದು ಮೈಸೂರಿನ ರಾಜೇಶ್ ಬೇಸರ ವ್ಯಕ್ತಪಡಿಸಿದರು. ವಾರಾಂತ್ಯದಲ್ಲಿ ವಯಸ್ಕರು ಹಾಗೂ ಮಕ್ಕಳೊಂದಿಗೆ ಆಗಮಿಸುವ ಭಕ್ತರಿಗೆ ತೊಂದರೆಯಾಗುತ್ತಿದ್ದು, ಪ್ರಸಿದ್ಧ ಪ್ರವಾಸಿ ಹಾಗೂ ಧಾರ್ಮಿಕ ಕ್ಷೇತ್ರವಾಗಿರುವ ಗೋಪಾಲಸ್ವಾಮಿ ಬೆಟ್ಟಕ್ಕೆ ಹೆಚ್ಚಿನ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರು.

# ಕಾಡಾನೆ ದಾಳಿಗೆ ಕರ್ತವ್ಯದಲ್ಲಿದ್ದ ಅರಣ್ಯ ವೀಕ್ಷಕ ಬಲಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಾಮರಾಜನಗರ**

ಏಕಾಏಕಿ ಕಾಡಾನೆಯೊಂದು ದಾಳಿ ನಡೆಸಿದ ಪರಿಣಾಮ ಅರಣ್ಯ ವೀಕ್ಷಕ ಮೃತಪಟ್ಟ ಘಟನೆ ಜಿಲ್ಲೆಯ ಮಲೆ ಮಹದೇಶ್ವರ ವನ್ಯಜೀವಿಧಾಮದ ಪೊನ್ನಾಚಿ ಅರಣ್ಯ ವಲಯದ ಹುಣಸೆಬಯಲು ಅರಣ್ಯ ಪ್ರದೇಶದಲ್ಲಿ ಸಂಭವಿಸಿದೆ. ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟ ನಿವಾಸಿ ಮಹಾದೇವಸ್ವಾಮಿ (48) ಮೃತ ದುರ್ದೈವಿ. ಮಲೆ ಮಹದೇಶ್ವರ ವನ್ಯಜೀವಿಧಾಮದಲ್ಲಿ ಅರಣ್ಯ ವೀಕ್ಷಕರಾಗಿ ಸುಮಾರು 20 ವರ್ಷಗಳಿಂದಲೂ ಇವರು ಕರ್ತವ್ಯ ನಿರ್ವಹಿಸುತ್ತಿದ್ದರು ಎಂದು ತಿಳಿದುಬಂದಿದೆ. ಮಹಾದೇವಸ್ವಾಮಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ. ಎಂದಿನಂತೆ ಶನಿವಾರ ರಾತ್ರಿ ಹುಣಸೆಬಯಲು ಅರಣ್ಯ ಪ್ರದೇಶದ ಕಳ್ಳ ಬೇಟೆ ತಡೆ ಶಿಬಿರದಲ್ಲಿದ್ದ ವೇಳೆ ಆನೆ ಶಬ್ದ ಕೇಳಿ ಹೊರಬಂದಾಗ ದಿಢೀರನೇ ಕಾಡಾನೆ ಎದುರಾಗಿ ದಾಳಿ ಮಾಡಿದೆ. ಮಹಾದೇವಸ್ವಾಮಿ ಕಾಡಾನೆ ಪ್ರಹಾರದಿಂದ ತಪ್ಪಿಸಿಕೊಳ್ಳಲಾಗದೇ ತೀವ್ರವಾಗಿ ಗಾಯಗೊಂಡು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿದ್ದರು.

ಕೂಡಲೇ ಇತರ ಸಿಬ್ಬಂದಿ ಅವರನ್ನು ಕೊಳ್ಳೇಗಾಲ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಕರೆತಂದರಾದರೂ ಮಾರ್ಗಮಧ್ಯದಲ್ಲೇ ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದ್ದಾರೆ. ಘಟನೆಯಲ್ಲಿ ಜೊತೆಗಿದ್ದ ಇನ್ನಿಬ್ಬರು ಸಿಬ್ಬಂದಿ ಸ್ವಲ್ಪದರಲ್ಲೇ ಕಾಡಾನೆ ದಾಳಿಯಿಂದ ಪಾರಾಗಿದ್ದಾರೆ ಎಂದು ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ.

ಮೃತ ಮಹಾದೇವಸ್ವಾಮಿ ಅವರ ಪತ್ನಿ ನೀಡಿರುವ ದೂರಿನಡಿ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್ ನಂ-31/2026 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಾಗಿ. ಮೃತ ಮಹಾದೇವಸ್ವಾಮಿ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ಕುಟುಂಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವಂತೆ ಸ್ಥಳೀಯರು ಒತ್ತಾಯಿಸಿದ್ದಾರೆ.

# ಕೆ.ಹೆಚ್.ಮುನಿಯಪ್ಪ ಸಚಿವ ಸ್ಥಾನ ತ್ಯಜಿಸಿ ಪುತ್ರಿಗೆ ಅವಕಾಶ ನೀಡುತ್ತಾರೆಂಬುದು ಕೇವಲ ಊಹಾಪೋಹ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಹಿರಿಯ ರಾಜಕಾರಣಿ ಹಾಗೂ ರಾಜ್ಯ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಅವರು ತಮ್ಮ ಸಚಿವ ಸ್ಥಾನವನ್ನು ಪುತ್ರಿ ರೂಪಕಲಾ ಶಶಿಧರ್ ಅವರಿಗೆ ಬಿಟ್ಟುಕೊಡಲಿದ್ದಾರೆ ಎಂಬ ಸುದ್ದಿ ಕೇವಲ ಊಹಾಪೋಹವಾಗಿದ್ದು, ಅದರಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದು ಮಾದಾರ ಮಹಾಸಭಾ ಜಿಲ್ಲಾಧ್ಯಕ್ಷ ಪತ್ರೇನಹಳ್ಳಿ ಕೃಷ್ಣ ಸ್ಪಷ್ಟಪಡಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆ.ಎಚ್.ಮುನಿಯಪ್ಪ ಅವರ ರಾಜಕೀಯ ಏಳಿಗೆಯನ್ನು ಸಹಿಸದ ಕೆಲವರು ಆಧಾರರಹಿತ ವದಂತಿಗಳನ್ನು ಹರಡುತ್ತಿದ್ದಾರೆ. ಮುನಿಯಪ್ಪ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಪುತ್ರಿಗೆ ಅವಕಾಶ ಮಾಡಿಕೊಡಲಿದ್ದಾರೆ ಎಂಬ ಮಾತು ಸತ್ಯಕ್ಕೆ ದೂರವಾದದ್ದು ಎಂದು ಹೇಳಿದರು. ಕೋಲಾರ ಲೋಕಸಭಾ ಕ್ಷೇತ್ರವನ್ನು ಸತತ ಏಳು ಬಾರಿ ಪ್ರತಿನಿಧಿಸಿರುವ ಮುನಿಯಪ್ಪ ಅವರ ಸುದೀರ್ಘ ರಾಜಕೀಯ ಅನುಭವ ರಾಜ್ಯಕ್ಕೆ ಅಗತ್ಯವಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸೇರಿದಂತೆ ಸಮುದಾಯಗಳ ಅಭಿವೃದ್ಧಿಗೆ ಅವರ ಅನುಭವ ಮತ್ತು ನಾಯಕತ್ವ ಮುಖ್ಯವಾಗಿದ್ದು, ಇದೇ ಕಾರಣಕ್ಕೆ ಸರ್ಕಾರ ಅವರಿಗೆ ಸಚಿವ ಸ್ಥಾನ ನೀಡಿದೆ ಎಂದು ಅಭಿಪ್ರಾಯಪಟ್ಟರು. ಪ್ರಸ್ತುತ ಸರ್ಕಾರದಲ್ಲಿಯೂ ತಮ್ಮ ಅನುಭವದ ಮೂಲಕ ಉತ್ತಮ ಸೇವೆ ಸಲ್ಲಿಸುವ ವಿಶ್ವಾಸವಿದೆ. ಅವರ ಪುತ್ರಿ ರೂಪಕಲಾ ಶಶಿಧರ್ ಅವರಿಗೆ ಮಹಿಳಾ ಕೋಟಾದಡಿ ಸಚಿವ ಸ್ಥಾನ ದೊರೆಯುವ ಸಾಧ್ಯತೆ ಇರಬಹುದು.

# ಮಂಡ್ಯಕ್ಕೆ ಕೃಷಿ ವಿವಿ ತರಲು ರಕ್ತ ಸುರಿಸಿದ್ದೇನೆ: ಸಚಿವ ಚಲುವರಾಯಸಾಮಿ

• **ಉದಯವಾಹಿನಿ, ಮಂಡ್ಯ**

ಕೃಷಿ ವಿಶ್ವವಿದ್ಯಾಲಯ ತರಲು ನಾವು ಕಣ್ಣೀರಲ್ಲ, ರಕ್ತ ಸುರಿಸಿದ್ದೇವೆ. 100 ಕೋಟಿ ಕಾಮಗಾರಿಗೆ ಈಗಾಗಲೇ ಹಣ ಮಂಜೂರಾಗಿದೆ. ಮಂಡ್ಯದ ಅಭಿವೃದ್ಧಿ ನೋಡಿ ವಿರೋಧ ಪಕ್ಷದವರಿಗೆ ಹೊಟ್ಟೆ ಉರಿಯಾಗುತ್ತಿದೆ' ಎಂದು ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು. ನಗರದ ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಲ್ಲಿ ಮಂಡ್ಯ ಶಾಸಕ ಪಿ.ರವಿಕುಮಾರ್ ನೇತೃತ್ವದಲ್ಲಿ ಶನಿವಾರ ಆಯೋಜಿಸಿದ್ದ ನೂತನ ಸಚಿವರುಗಳ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಮಂಡ್ಯಕ್ಕೆ ಒಂದು ಕೃಷಿ ವಿವಿ ತರಲು 20 ವರ್ಷ ಅಧಿಕಾರದಲ್ಲಿದ್ದರೂ ನಿಮ್ಮಿಂದ ಆಗಲಿಲ್ಲ. ನನ್ನದು ಮಂಡ್ಯ ಎಂದು ಹೇಳಿಕೊಳ್ಳಲು ನಾಚಿಕೆ ಆಗಲ್ಲವೇ ಇಲ್ಲಿಗೆ ಬಂದು ಕಣ್ಣೀರು ಹಾಕುವ ಅಗತ್ಯವಿಲ್ಲ' ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು. 'ನನಗೆ ಸಿಕ್ಕಿರುವ ಈ ಸಚಿವ ಸ್ಥಾನ ಕಾರ್ಯಕರ್ತರ ಭಿಕ್ಷೆ. ನಿಮ್ಮ ಋಣವನ್ನು ತೀರಿಸಲು ಸಾಧ್ಯವಿಲ್ಲ. 2028ಕ್ಕೆ ಮಂಡ್ಯವನ್ನು ಇನ್ನಷ್ಟು ಬಲಪಡಿಸುತ್ತೇವೆ. ವಿರೋಧಿಗಳು ಎದುರಿಗೆ ಬಂದು ಮಾತನಾಡಲಿ, ಉತ್ತರ ಕೊಡುತ್ತೇನೆ' ಎಂದು ಸವಾಲು ಹಾಕಿದರು.

ಮಂಡ್ಯ ಈಗ ಕಾಂಗ್ರೆಸ್ ನ ಭದ್ರಕೋಟೆ. ಲಘುವಾಗಿ ಯಾರೂ ಮಾತನಾಡಬಾರದು. ಈ ಹಿಂದೆ ನಮ್ಮ ಭದ್ರಕೋಟೆ ಅಂದುಕೊಂಡಿದ್ರು. ಜನರ ಪ್ರೀತಿ, ಆಶೀರ್ವಾದದಿಂದ ಜಿಲ್ಲೆಯಲ್ಲಿ 6 ಕ್ಷೇತ್ರಗಳನ್ನು ಗೆದ್ದಿದ್ದೇವೆ. ಮತ್ತೊಮ್ಮೆ ಮಂತ್ರಿ ಆಗೋದು ಅಷ್ಟು ಸುಲಭವಲ್ಲ. ನಿಮ್ಮ ಪ್ರೀತಿ ಇದ್ದರೆ ಮಾತ್ರ ಇದು ಸಾಧ್ಯ.

ನಮ್ಮ ಅಭಿವೃದ್ಧಿ ಕಾರ್ಯಗಳೇ ಉತ್ತರವಾಗಿರುತ್ತದೆ ಎಂದರು.ಕಾವೇರಿ ನೀರು ಮೊದಲು ಕುಡಿಯುವುದಕ್ಕೆ ಮತ್ತು ರೈತರಿಗೆ, ಅಮೇಲೆ ತಮಿಳುನಾಡಿಗೆ ಎಂಬ ನಮ್ಮ ನಿಲುವು ಸ್ಪಷ್ಟವಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಇಂದು ನೀವು ನಿಮ್ಮ ಪ್ರೀತಿಪಾತ್ರರೊಂದಿಗೆ ಸಮಯವನ್ನು ಕಳೆಯುವಿರಿ ಮತ್ತು ಅವರ ಮುಂದೆ ನಿಮ್ಮ ಭಾವನೆಗಳನ್ನು ಇಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವನ್ನು ಉತ್ತಮವಾಗಿಸುವ ನಿಮ್ಮ ಪ್ರಯತ್ನಗಳು ಇವತ್ತು ನಿರೀಕ್ಷೆಗೂ ಮೀರಿ ಫಲ ನೀಡುತ್ತವೆ.

**ವೃಷಭ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ.

**ಮಿಥುನ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ .

**ಕರ್ಕಾಟಕ** ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು.

**ಸಿಂಹ** ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು.

**ಕನ್ಯಾ** ನಿಮ್ಮ ಆರೋಗ್ಯ ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ನೀವು ಸಾಲ ಪಡೆಯಬಹುದು. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ.

**ತುಲಾ** ಸಮೃದ್ಧ ಮತ್ತು ಹೆಚ್ಚಿನ ಕೊಲೆಸ್ಟರಾಲ್ ಇರುವ ಆಹಾರ ತಪ್ಪಿಸಲು ಪ್ರಯತ್ನಿಸಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

**ವೃಶ್ಚಿಕ** ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು.

**ಧನಸ್ಸು** ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ ಮನೋಲ್ಲಾಸ ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ.

**ಮಕರ** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಹೂಡಿಕೆ ಮಾಡುವುದು ಅನೇಕ ಬಾರಿ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ,

**ಕುಂಭ** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ – ಮತ್ತು ಹಿಂದಿನ ದಿನಗಳ ಶ್ರಮ ಈಗ ಫಲ ನೀಡುತ್ತದೆ. ನಿಮ್ಮ ಪತ್ನಿಯ ಕೆಲಸವನ್ನು ಕಡಿಮೆ ಮಾಡಲು ಅವರಿಗೆ ಮನೆಗೆಲಸದಲ್ಲಿ ಸಹಾಯ ಮಾಡಿ.

**ಮೀನ** ಪ್ರವಾಸ–ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

# ಇಂದು ಖಾತೆ ಹಂಚಿಕೆ, ಯಾವುದೇ ಗೊಂದಲವಿಲ್ಲ: ಸಚಿವ ಈಶ್ವರ ಖಂಡ್ರೆ

• **ಉದಯವಾಹಿನಿ, ಬಳ್ಳಾರಿ**

ಸಚಿವರಿಗೆ ಖಾತೆ ಹಂಚಿಕೆ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ. ಖಾತೆ ಹಂಚಿಕೆ ಸುಗಮವಾಗಿ ನಡೆಯುವ ಬಗ್ಗೆ ಸಿಎಂ ತಿಳಿಸಿದ್ದಾರೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು. ಬಳ್ಳಾರಿಯಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಾಜಿ ಸಚಿವ ಬಿ. ಶ್ರೀರಾಮುಲು ಅವರ ಹೇಳಿಕೆಗಳಿಗೆ ತಿರುಗೇಟು ನೀಡಿದರು. ರಾಜ್ಯದಲ್ಲಿ ಕೊತ್ವಾಲ್ ಶಿಷ್ಯಂದರ ಆಡಳಿತ ನಡೆಯುತ್ತಿದೆ ಎಂಬ ಶ್ರೀರಾಮುಲು ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಖಂಡ್ರೆ, ಕಾಂಗ್ರೆಸ್‌ನ ಜನಪ್ರಿಯತೆ ಹೆಚ್ಚುತ್ತಿರುವುದು ಬಿಜೆಪಿಯವರಿಗೆ ಅರಿವಾಗಿದೆ. 2028ರಲ್ಲಿಯೂ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ ಎಂಬುದು ಅವರಿಗೆ ಗೊತ್ತಾಗಿದೆ. ಹೀಗಾಗಿ ಹತಾಶ ಮನೋಭಾವದಿಂದ ಕೀಳುಮಟ್ಟದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಟೀಕಿಸಿದರು.

ರಿಪಬ್ಲಿಕ್ ಆಫ್ ಬಳ್ಳಾರಿ ಎಂಬ ಕುಖ್ಯಾತಿ ಯಾರ ಅವಧಿಯಲ್ಲಿ ಬಂದಿತ್ತು ಎಂಬುದನ್ನು ಶ್ರೀರಾಮುಲು ಹಾಗೂ ರೆಡ್ಡಿ ಸಹೋದರರು ಆತ್ಮಾವಲೋಕನ ಮಾಡಿಕೊಳ್ಳಬೇಕು. ಬಳ್ಳಾರಿಗೆ ಕುಖ್ಯಾತಿ ತಂದವರು ಯಾರು ಎಂಬುದು ಜಿಲ್ಲೆಯ


ಉದಯವಾಹಿನಿ ಚಿತ್ರ

ಜನರಿಗೆ ಗೊತ್ತಿದೆ. ಇಂತಹ ಹೇಳಿಕೆಗಳನ್ನು ನೀಡುವ ಮೊದಲು ಅವರು ತಮ್ಮ ಹಿಂದಿನ ಆಡಳಿತವನ್ನು ನೆನಪಿಸಿಕೊಳ್ಳಬೇಕು ಎಂದು ಖಂಡ್ರೆ ಹೇಳಿದರು.

**ಎಲ್ಲಾ ಸಮುದಾಯಗಳಿಗೂ ಪ್ರಾತಿನಿಧ್ಯ:** ಮಹಿಳೆಯರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷ ಮಹಿಳೆಯರಿಗಾಗಿ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಸಚಿವ ಸಂಪುಟದಲ್ಲಿಯೂ ಮಹಿಳೆಯರಿಗೆ ಅವಕಾಶ ಸಿಗಲಿದೆ. ಎಲ್ಲ ಸಮುದಾಯಗಳಿಗೂ ಸೂಕ್ತ ಪ್ರಾತಿನಿಧ್ಯ ನೀಡಲಾಗುವುದು ಎಂದು ತಿಳಿಸಿದರು.

**ನಾಗೇಂದ್ರ ರಾಜೀನಾಮೆಗೆ ಒತ್ತಾಯ, ಖಂಡ್ರೆ ತಿರುಗೇಟು:** ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಬಿಜೆಪಿ ಒತ್ತಾಯಿಸುತ್ತಿರುವ ವಿಚಾರವಾಗಿ ಮಾತನಾಡಿದ ಖಂಡ್ರೆ, ಲೋಕಸಭೆಯಲ್ಲಿ ಏನು ನಡೆಯುತ್ತಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ವಿದ್ಯಾರ್ಥಿಗಳನ್ನು ಯಾವ ರೀತಿ ನಡೆಸಿಕೊಳ್ಳಲಾಗಿದೆ, ಪೊಲೀಸ್ ವ್ಯವಸ್ಥೆಯನ್ನು ಹೇಗೆ ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂಬುದೂ ಬಹಿರಂಗವಾಗಿದೆ ಎಂದು ಆರೋಪಿಸಿದರು. ಈ ಹಿನ್ನೆಲೆಯಲ್ಲಿ ಕೇಂದ್ರ ಸಚಿವರು ರಾಜೀನಾಮೆ ನೀಡಬೇಕಾಯಿತು.

ವಿದ್ಯಾರ್ಥಿಗಳ ಮೇಲೆ ದಾಳಿ, ಹಲ್ಲೆ ಹಾಗೂ ಹಿಂಸೆ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಬಿಜೆಪಿ ಮೊದಲು ಪ್ರತಿಭಟನೆ ನಡೆಸಲಿ ಎಂದು ಅವರು ಸವಾಲು ಹಾಕಿದರು.ವಿದ್ಯಾರ್ಥಿಗಳ ಮೇಲಿನ ಹಲ್ಲೆ ಪ್ರಕರಣಗಳ ನೈತಿಕ ಹೊಣೆಗಾರಿಕೆಯನ್ನು ಕೇಂದ್ರ ಗೃಹ ಸಚಿವರು ಹೊರಬೇಕು. ಕೇಂದ್ರ ಗೃಹ ಸಚಿವರ ರಾಜೀನಾಮೆಗೆ ಕಾಂಗ್ರೆಸ್ ಒತ್ತಾಯಿಸಲಿದೆ ಎಂದು ಈಶ್ವರ ಖಂಡ್ರೆ ಹೇಳಿದರು.

# ಕೈಕೊಟ್ಟ ಮುಂಗಾರು: ಟ್ರ್ಯಾಕ್ಟರ್‌ಗಳಿಂದ ಬೆಳೆ ನಾಶಪಡಿಸುತ್ತಿರುವ ಧಾರವಾಡ ಜಿಲ್ಲೆಯ ರೈತರು

## ಕೇಂದ್ರ ಹಾಗೂ ರಾಜ್ಯ ಸರ್ಕಾರವು ಸಾಲ ಮನ್ನಾ ಹಾಗೂ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ರೈತರು ಒತ್ತಾಯಿಸಿದರು.

• **ಉದಯವಾಹಿನಿ, ಹುಬ್ಬಳ್ಳಿ:**

ಪ್ರಸಕ್ತ ವರ್ಷ ಮುಂಗಾರು ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ರಾಜ್ಯದಲ್ಲಿಯೇ ಕೃಷಿಗೆ ಹೆಸರುವಾಸಿಯಾಗಿರುವ ಧಾರವಾಡ ಜಿಲ್ಲೆಯ ಕುಂದಗೋಳ, ಅಣ್ಣಿಗೇರಿ, ನವಲಗುಂದ ತಾಲ್ಲೂಕಿನ ರೈತರು ಬಿತ್ತನೆಗಾಗಿ ಸಾಲ ಮಾಡಿ ಕೈಸುಟ್ಟುಕೊಂಡಿದ್ದಾರೆ. ಇತ್ತ ಬೆಳೆಯೂ ಇಲ್ಲ, ಅತ್ತ ಸಾಲವೂ ಬೆಳೆಯಿತು ಎಂದು ಆತಂಕಕ್ಕೆ ಒಳಗಾಗಿದ್ದಾರೆ.

ತಾಲ್ಲೂಕಿನ ಕೆಲವೆಡೆ ಸ್ವಲ್ಪ ಮಳೆ ಸುರಿದ ಪರಿಣಾಮ ಬಿತ್ತನೆ ಮಾಡಿದ ಹೆಸರು ಕಾಳು, ಹತ್ತಿ, ಉದ್ದು, ಶೇಂಗಾ, ಗೋವಿನ ಜೋಳ ಶೇ. 90ರಷ್ಟು ಒಣಗಿವೆ. ಸಚಿವ ಸಂತೋಷ ಲಾಡ್ ಬರ ಪರಿಸ್ಥಿತಿ ಅಧ್ಯಯನ ವೇಳೆ ಬೆಳೆಗಳ ಬೆಳವಣಿಗೆ ಕುಂಠಿತ ಆಗಿರುವುದನ್ನು ಕಂಡು ಮಮ್ಮಲ ಮರುಗಿದ್ದಾರೆ. ರೈತರು ಎಕರೆಗೆ 20 ಸಾವಿರವರೆಗೂ ಖರ್ಚು ಮಾಡಿ ಮುಂಗಾರು ಬಿತ್ತನೆ ಮಾಡಿದ್ದಾರೆ. ಆದರೆ, ಮಳೆ ಇಲ್ಲದೆ ಈ ಪೈಕಿ ಶೇ. 25 ರಿಂದ 30ರಷ್ಟು ರೈತರು ಹೆಸರು ಕಾಳು, ಉದ್ದು ಬೆಳೆ ಹರಗಿದ್ದಾರೆ. ಇನ್ನು ಕೆಲವೆಡೆ ಕುರಿ ಮೇಯಿಸಲು ಬಿಟ್ಟಿದ್ದಾರೆ. ಬೆಳೆ ಬಂದರೂ ಮಳೆ ಇಲ್ಲದೇ ರೋಗಬಾಧೆಗೆ ತೀವ್ರ ನಷ್ಟವಾಗಿದೆ. ಟ್ರ್ಯಾಕ್ಟರ್‌ಗಳಿಂದ ಬೆಳೆ ನಾಶಪಡಿಸುತ್ತಿರುವ ಧಾರವಾಡ ಜಿಲ್ಲೆಯ ರೈತರು

ಧಾರವಾಡ ಜಿಲ್ಲೆಯ ಕುಂದಗೋಳ, ಅಣ್ಣಿಗೇರಿ ಹಾಗೂ ನಮವಲಗುಂದ ತಾಲ್ಲೂಕುಗಳ ಹೆಸರು ಕೃಷಿಯಲ್ಲಿ ಮುಂದೆ ಇದ್ದವು. ಇಲ್ಲಿ ಸಾಮಾನ್ಯವಾಗಿ ಎರಿ ಭೂಮಿ ಇರುವದರಿಂದ ರಾಜ್ಯದಲ್ಲಿಯೇ ಹೆಸರು ಉತ್ಪಾದನೆಯಲ್ಲಿ ವಾಸಿಯಾಗಿದೆ. ದಶಕದ ಹಿಂದೆ ಮೆಣಸಿನಕಾಯಿ ಕೃಷಿ ಮೂಲಕ ರಾಜ್ಯದಲ್ಲಿಯೇ ಗಮನ ಸೆಳೆದಿತ್ತು. ಬಳಿಕ ಹತ್ತಿಯನ್ನು ಇಲ್ಲಿ ಸಾಕಷ್ಟು ಪ್ರಮಾಣದಲ್ಲಿ ಬೆಳೆಯಲಾಗುತ್ತಿದ್ದು, ಜವಳಿ ಉದ್ಯಮಕ್ಕೆ ತನ್ನದೇ ಆದ ಕೊಡುಗೆ ನೀಡಿದೆ.

**ರೈತರು ಕುರಿ ಮೇಯಿಸಲು ಬಿಟ್ಟಿದ್ದಾರೆ.**

ನಾಲ್ಕೈದು ವರ್ಷಗಳಿಂದ ಇಲ್ಲಿನ ರೈತರು ಹೆಸರುಕಾಳು ಹಾಗೂ ಉದ್ದನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತಿದ್ದಾರೆ. ಆದರೆ, ಈ ಬಾರಿ ಮಳೆ ಕೈಕೊಟ್ಟ ಪರಿಣಾಮ ಕೃಷಿ ಉತ್ಪಾದನೆಗೆ ಹೊಡೆತ ಬಿದ್ದಿದ್ದು, ಬೆಳೆದ ಬೆಳೆಯನ್ನು ರೈತರು ಕೈಯಿಂದ ಹಾಗೂ ಟ್ರ್ಯಾಕ್ಟರ್‌ಗಳ ಸಹಾಯದಿಂದ ನಾಶಪಡಿಸುತ್ತಿದ್ದಾರೆ.

ಕುಂದಗೋಳ ತಾಲ್ಲೂಕಿನ ರೈತ ಮುಖಂಡ ಬಸವರಾಜ್ ಯೋಗಪ್ಪನವರ್ ಮಾತನಾಡಿ, ಮಳೆಯಿಲ್ಲದೆ ಹೆಸರು, ಉದ್ದು ಸೇರಿದಂತೆ ಎಲ್ಲಾ ಬೆಳೆಗಳು ಹಾಳಾಗಿ ಹೋಗಿವೆ.

ರಾಜ್ಯ ಸಚಿವರು ಹಾಗೂ ವಿರೋಧ ಪಕ್ಷದ ಬರ ಅಧ್ಯಯನ ತಂಡ ಭೇಟಿ ನೀಡಿ ಹೋಗಿದ್ದಾರೆ. ನಾವು ಒಂದು ಎಕರೆಗೆ 25–30 ಸಾವಿರದಷ್ಟು ಖರ್ಚು ಮಾಡಿದ್ದೇವೆ. ಸರ್ಕಾರ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು. ಬೆಳೆ ವಿಮೆ ಪರಿಹಾರ ಬಿಡುಗಡೆ ನೀಡಬೇಕು ಎಂದು ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದರು.

ಮಳೆಯಾಗದೆ ಇರುವುದರಿಂದ ಹೆಸರು ಬೆಳೆಯನ್ನು ಸಂಪೂರ್ಣವಾಗಿ ಹರಗಿ ಬಿಟ್ಟಿದ್ದೇವೆ. ಈಗ ಖರ್ಚು ಹಣ ಹೋಗಿದೆ. ಹೀಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರತಿ ಎಕರೆಗೆ 50 ಸಾವಿರ ಪರಿಹಾತ ಕೊಡಬೇಕು. ರೈತರ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಎಂದು ರೈತ ಚಿದಾನಂದ ಕುಸುಗಲ್ ಒತ್ತಾಯಿಸಿದರು.ಕೊಳವೆ ಬಾವಿಯಲ್ಲಿ ನೀರಿನ ಪ್ರಮಾಣ ಕುಸಿತ.

ಅನಿಯಮಿತ ವಿದ್ಯುತ್ ಕಡಿತ ಮತ್ತು ಅಂತರ್ಜಲ ಕೃಷಿಯಿಂದ ಕೊಳವೆ ಬಾವಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದು, ಕೈಗೆಬಂದ ತುತ್ತು ಬಾಯಿಗೆ ಬಾರದ ಪರಿಸ್ಥಿತಿ ನಿರ್ಮಾಣವಾಗಿದೆ. ಬೆಳೆ ಉಳಿಸಿಕೊಳ್ಳಲು ದಾರಿ ಕಾಣದೆ ಬೆಳೆಯನ್ನು ಟ್ರ್ಯಾಕ್ಟರ್ ಸಹಾಯ ದಿಂದ ನಾಶ ಮಾಡಿದ್ದಾರೆ.15 ದಿನಗಳ ಹಿಂದೆ ಮಳೆ ಬಂದಿದ್ದರೆ ಫಸಲು ಸಮೃದ್ಧವಾಗಿ ಬೆಳೆದು ಆಗಸ್ಟ್ ತಿಂಗಳ ಅಂತ್ಯದಲ್ಲಿ ಕಟಾವಿಗೆ ಬರುತ್ತಿತ್ತು.


ಉದಯವಾಹಿನಿ ಚಿತ್ರ

**ಕಾಡುಹಂದಿಗಳಿಂದ ಬೆಳೆ ನಾಶ; ಪರಿಹಾರ ನೀಡದಿದ್ದರೆ ವಿಷ ಕುಡಿಯೊದೊಂದೇ ಮಾರ್ಗ ಎಂದ ರೈತ, ಅರಣ್ಯ ಇಲಾಖೆ ವಿರುದ್ಧ ಆಕ್ರೋಶಎಕರೆಗೆ 50 ಕ್ವಿಂಟಲ್ ಇಳುವರಿ ನಿರೀಕ್ಷಿಸಲಾಗಿತ್ತು. ಕನಿಷ್ಠ 5 ಲಕ್ಷ ಮೌಲ್ಯದ ಮೆಕ್ಕೆಜೋಳ ದೊರೆಯುತ್ತಿತ್ತು. ಮಳೆ ಬಾರದ ಪರಿಣಾಮ ವೆಚ್ಚ ಮಾಡಿದ 2 ಲಕ್ಷದ ಜತೆಗೆ ಸಮಯ ಮತ್ತು ಶ್ರಮ ವ್ಯರ್ಥವಾಗಿದೆ ಎನ್ನುತ್ತಾರೆ .-ರೈತ ರಾಜಾ ಸಾಬ್.**

### ರೈತರಿಗೆ ಕೃಷಿ ನಿರ್ದೇಶಕರ ಸಲಹೆ

**ಬೆಳೆ ಆ್ಯಪ್‌ನಲ್ಲಿ ರೈತರು ಸ್ವಯಂ ಬೆಳೆ ಸಮೀಕ್ಷೆ ಮಾಡಿಕೊಂಡರೆ ಮಾತ್ರ, ಅದರ ಆದಾರದಲ್ಲಿ ಬೆಳೆನಷ್ಟ ಪರಿಹಾರ ದೊರೆಯುತ್ತದೆ. ರೈತರು ಬೆಳೆನಾಶ ಮಾಡುವ ಮೊದಲು ಬೆಳೆ ಆ್ಯಪ್‌ನಲ್ಲಿ ಸ್ವಯಂ ಸಮೀಕ್ಷೆ ಮಾಡಿಕೊಳ್ಳಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಸಲಹೆ ನೀಡಿದ್ದಾರೆ.**

# ಒಂಟಿ ಸಲಗದ ಪುಂಡಾಟಕ್ಕೆ ಕಿತ್ತಾವರ ಗ್ರಾಮ ತಲ್ಲಣ: ಸೆರೆ ಹಿಡಿಯುವಂತೆ ಆಗ್ರಹ

• **ಉದಯವಾಹಿನಿ, ಹಾಸನ:**

ಜಿಲ್ಲೆಯ ಬೇಲೂರು ತಾಲ್ಲೂಕು ಅರೇಹಳ್ಳಿ ಹೋಬಳಿ ಅನುಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿತ್ತಾವರ ಗ್ರಾಮದ ಸುತ್ತಮುತ್ತ ಒಂಟಿ ಕಾಡಾನೆಯ ಆಟಾಟೋಪಕ್ಕೆ ಇಲ್ಲಿನ ನಿವಾಸಿಗಳು ಅಕ್ಷರಶಃ ಬೆಚ್ಚಿಬಿದ್ದಿದ್ದಾರೆ.

ಯಾವುದೇ ಕಾಡಾನೆಗಳ ಗುಂಪಿಗೆ ಸೇರದೆ ಒಂಟಿಯಾಗಿ ಓಡಾಡುತ್ತಿರುವ ಸಲಗವನ್ನು ಕೆ.ಪಿ.ಕಾಲರ್–2 ಎಂದು ಗುರುತಿಸಲಾಗಿದೆ. ಹಲವು ದಿನಗಳ ಹಿಂದೆ ಈ ಗಂಡಾನೆಯನ್ನು ಸೆರೆಹಿಡಿದು ರೇಡಿಯೋ ಕಾಲರ್ ಅಳವಡಿಸಲಾಗಿತ್ತು. ಆದರೆ ಇದೀಗ ರೇಡಿಯೋ ಕಾಲರ್ ಇಲ್ಲದಿರುವುದರಿಂದ ಕಾಡಾನೆ ಕಣ್ಣಿಗೆ ಬಿದ್ದಾಗ ಮಾತ್ರ ಅದರ ಲೊಕೇಶನ್ ಹಂಚಿಕೊಳ್ಳಲು ಸಾಧ್ಯವಾಗುತ್ತಿದೆ. ಕಾಡಾನೆಯು ಕಿತ್ತಾವರ ಗುಡ್ಡ ಹಾಗೂ ಕಿತ್ತಾವರ ಕಾಫಿ ಎಸ್ಟೇಟ್ ಪ್ರದೇಶದಲ್ಲಿ ಹಗಲು ವೇಳೆ ವಿಶ್ರಾಂತಿ ಪಡೆಯುತ್ತಾ, ರಾತ್ರಿ ಆಗುತ್ತಿದ್ದಂತೆ ಕಾಫಿ ತೋಟಗಳ ಮೂಲಕ ಗ್ರಾಮಗಳತ್ತ ನುಗ್ಗಿ ಪುಂಡಾಟ ಮೆರೆಯುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

**ಕಾರಿನ ಮೇಲೆ ಏಕಾಏಕಿ ದಾಳಿ:** ಅನುಘಟ್ಟ ಪಂಚಾಯಿತಿ ವ್ಯಾಪ್ತಿಯ ದೊಲಮನೆ ಗ್ರಾಮದ ಕಾಫಿ ಬೆಳೆಗಾರ ಮೊಹಮ್ಮದ್ ಝಾಯಿದ್ ಕುಟುಂಬ ಆ.2ರಂದು ಮದುವೆ


ಉದಯವಾಹಿನಿ ಚಿತ್ರ

ಕಾರ್ಯಕ್ರಮವೊಂದನ್ನು ಮುಗಿಸಿಕೊಂಡು ಕಾರಿನಲ್ಲಿ ಸ್ವಗ್ರಾಮಕ್ಕೆ ಮರಳಿತ್ತು. ತಡರಾತ್ರಿ ಕಾರನ್ನು ಶೆಡ್ ಒಳಗೆ ನಿಲ್ಲಿಸಿ ಇಳಿಯಬೇಕೆನ್ನುವಷ್ಟರಲ್ಲಿ ಮನೆಯ ಬಳಿ ಅಡಗಿ ನಿಂತಿದ್ದ ಕಾಡಾನೆ ಏಕಾಏಕಿ ಕಾರಿನ ಹಿಂಭಾಗಕ್ಕೆ ದಾಳಿ ಮಾಡಿತ್ತು. ದಂತದಿಂದ ಚುಚ್ಚಿ ಕಾರನ್ನು ಎತ್ತಿ ಎಸೆಯಲು ಪ್ರಯತ್ನಿಸಿತ್ತು. ಇದರಿಂದ ಕಾರಿನಲ್ಲಿದ್ದ ಝಾಯಿದ್ ಅವರ ತಂದೆ, ತಾಯಿ, ಅಕ್ಕ ಹಾಗೂ ಮಕ್ಕಳು ಭಯಭೀತರಾಗಿ ಜೋರಾಗಿ ಕಿರುಚಾಡಿದ್ದಾರೆ. ಅದೃಷ್ಟವಶಾತ್ ಎರಡನೇ ಬಾರಿ ದಾಳಿ ಮಾಡದೆ ಕಾಡಾನೆ ತೋಟದೊಳಗೆ ತೆರಳಿದ ಬಳಿಕ ಕುಟುಂಬದ ಸದಸ್ಯರು ಎಚ್ಚರಿಕೆಯಿಂದ ಮನೆಯೊಳಗೆ ತೆರಳಿ ಬಚಾವಾಗಿದ್ದರು.

**ರೈತನ ಸಾವಿಗೆ ಕಾರಣವಾದ ಕಾಡಾನೆಯೇ:** ಕಣಗುಪ್ಪೆ ಗ್ರಾಮದ ರೈತ ಧರ್ಮರಾಜು ಅವರನ್ನು ಬಲಿ ಪಡೆದ ಕಾಡಾನೆಯೇ ಇದೀಗ ಕಿತ್ತಾವರ ಭಾಗದಲ್ಲಿ ಓಡಾಡುತ್ತಿರುವ ಒಂಟಿ ಕಾಡಾನೆಯಾಗಿರಬಹುದು ಎಂಬ ಶಂಕೆಯನ್ನು ಸ್ಥಳೀಯರು ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳು ಕಾಡಾನೆಯ ಹೆಜ್ಜೆ ಗುರುತು, ಚಲನ–ವಲನ ಹಾಗೂ ಇತರೆ ಮಾಹಿತಿಯನ್ನು ಪರಿಶೀಲಿಸಿದ್ದಾರೆ. ಈಗಾಗಲೇ ಮಾನವ ಜೀವ ಬಲಿಯಾಗಿರುವ ಪ್ರದೇಶದಲ್ಲಿ ಮತ್ತೊಮ್ಮೆ ಅಪಾಯಕಾರಿ ಒಂಟಿ ಕಾಡಾನೆಯ ಓಡಾಟ ಹೆಚ್ಚಿರುವುದು ಸಾರ್ವಜನಿಕರಲ್ಲಿ ತೀವ್ರ ಆತಂಕ ಮೂಡಿಸಿದೆ.

### ಕಾಡಾನೆ ಸೆರೆ ಹಿಡಿಯುವಂತೆ ಆಗ್ರಹ

**ಸಂಜೆಯಾದ ಬಳಿಕ ಮನೆಯಿಂದ ಹೊರಬರಲು ಭಯದ ವಾತಾವರಣ ಸೃಷ್ಟಿಯಾಗಿದೆ. ಹೀಗಾಗಿ ಕಾಡಾನೆಯನ್ನು ಶೀಘ್ರವಾಗಿ ಕಾರ್ಯಾಚರಣೆ ಮೂಲಕ ಸೆರೆಹಿಡಿದು ಸ್ಥಳಾಂತರ ಮಾಡಬೇಕು. ಗುಂಪಿನಿಂದ ಬೇರ್ಪಟ್ಟಿರುವ ಎಲ್ಲ ಒಂಟಿ ಕಾಡಾನೆಗಳ ಸ್ಥಳಾಂತರಕ್ಕೆ ಅರಣ್ಯ ಇಲಾಖೆ ತಕ್ಷಣ ಕ್ರಮವಹಿಸಬೇಕು ಎಂದು ಗ್ರಾಮಸ್ಥರು ಅರಣ್ಯ ಇಲಾಖೆಗೆ ಆಗ್ರಹಿಸಿದ್ದಾರೆ.**

# ಆರು ತಿಂಗಳ ಬಳಿಕ ಪತಿ ಕೊಲೆ ರಹಸ್ಯ ಬಾಯಿಬಿಟ್ಟ ಪತ್ನಿ ಖತರ್‌ನಾಕ್ ಲೇಡಿ, ಪ್ರಿಯಕರ ಅರೆಸ್ಟ್

• **ಉದಯವಾಹಿನಿ, ಚಿಕ್ಕೋಡಿ:**

ತಾಲ್ಲೂಕಿನ ಖಡಕಲಾಟ ಗ್ರಾಮದಲ್ಲಿ ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಗಂಡನನ್ನು ಕೊಲೆಗೈದು ಕಥೆ ಕಟ್ಟಿದ್ದ ಖತರನಾಕ್ ಪತ್ನಿ ಹಾಗೂ ಪ್ರೀಯಕರನನ್ನು 6 ತಿಂಗಳ ಬಳಿಕ ಪೊಲೀಸರು ಬಂಧಿಸಿದ್ದಾರೆ. ರಾಘು ಗಾವಡೆ (40) ಹೆಂಡತಿಯಿಂದಲೇ ಕೊಲೆಯಾದ ದುರ್ದೈವಿ. ರಾಘು ಗಾವಡೆ ಕುರಿ ಕಾಯುವ ಕೆಲಸ ಮಾಡಿಕೊಂಡಿದ್ದ. ಈತನನ್ನು ಸಂಚು ರೂಪಿಸಿ ಬಂಗಾರಿ ಗಾವಡೆ ಹಾಗೂ ರಾಮಾ ರಾಣ ಇಬ್ಬರು ಸೇರಿ ಕೊಲೆಗೈದಿದ್ದರು. ಬಳಿಕ ಹೊಲದಲ್ಲಿ ಶವವನ್ನು ಹೂತು ಹಾಕಿದ್ದರು. ಆರೋಪಿ ರಾಘು ಗಾವಡೆ ಸಹೋದರ ಸಂಬಂಧಿಯಾಗಿದ್ದ. ಆತನ ಜೊತೆ ಆರೋಪಿ ಬಂಗಾರಿ ಅಕ್ರಮ ಸಂಬಂಧ ಹೊಂದಿದ್ದಳು. ಇದಕ್ಕೆ ಅಡ್ಡಿಯಾಗಿದ್ದ ಗಂಡನನ್ನು ಇಬ್ಬರು ಸೇರಿ ಹತ್ಯೆ ಮಾಡಿದ್ದರು. ಬಳಿಕ ಗಂಡ ಕುರಿ ಕಾಯಲು ಬೇರೆ ಜಿಲ್ಲೆಗೆ ಹೋಗಿದ್ದಾನೆ ಎಂದು ಮನೆಯಲ್ಲಿ ನಂಬಿಸಿದ್ದರು. ಹತ್ಯೆಯಾದ ರಾಘುವಿನ ಅಣ್ಣ ಲಘುಮಣ್ಣ ಹಾಗೂ ಹಿರಿಯರು ವಿಚಾರಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಕುಟುಂಬಸ್ಥರು ಪೊಲೀಸ್ ಠಾಣೆಗೆ ತೆರಳಿ ಪ್ರಕರಣ ದಾಖಲಿಸಿದ್ದಾರೆ. ತಕ್ಷಣ ಪೊಲೀಸರು ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

# 15 ಅಡಿ ಉದ್ದದ ಬೃಹತ್ ಹೆಬ್ಬಾವು ಸೆರೆ ವಿಡಿಯೋ : ದಾಂಡೇಲಿ

• **ಉದಯವಾಹಿನಿ, ದಾಂಡೇಲಿ(ಉತ್ತರ ಕನ್ನಡ):**

ಜಿಲ್ಲೆಯ ದಾಂಡೇಲಿ ತಾಲ್ಲೂಕಿನ ಮೂಲಂಗಿ ಗ್ರಾಮದಲ್ಲಿ ಸಂಜೆ ಸುಮಾರು 5 ಗಂಟೆಗೆ ಬೃಹತ್ ಗಾತ್ರದ ಹೆಬ್ಬಾವು ಕಾಣಿಸಿಕೊಂಡು ಕೆಲಕಾಲ ಆತಂಕ ಸೃಷ್ಟಿಸಿತು. 15 ಅಡಿ ಉದ್ದದ ಹೆಬ್ಬಾವು ಕುರಿಯನ್ನು ಕಚ್ಚಿ, ದೇಹಕ್ಕೆ ಸುತ್ತಿಕೊಂಡು ನುಂಗಲು ಯತ್ನಿಸುತ್ತಿತ್ತು. ಕುರಿಗೆ ಹೆಬ್ಬಾವು ಸುತ್ತಿಕೊಂಡಿರುವುದನ್ನು ಗಮನಿಸಿದ ಜನರು ಅರಣ್ಯ ಇಲಾಖೆ ಮತ್ತು ಉರಗ ತಜ್ಞರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಧಾವಿಸಿದ ಅರಣ್ಯಾಧಿಕಾರಿ ಜಗದೀಶ್, ಪಾರ್ಕ್ ಗಾರ್ಡ್ ದೀಪಕ್ ಸೇರಿದಂತೆ ಸಿಬ್ಬಂದಿ ಹಾಗೂ ಉರಗ ತಜ್ಞ ರಾಜಕ್ ಶಾ, ಮಲಿಕ್ ರಿಹಾನ್ ನೇತೃತ್ವದ ತಂಡ ಜಾಗರೂಕತೆಯಿಂದ ಹೆಬ್ಬಾವನ್ನು ಹಿಡಿದಿದೆ. ನಂತರ ಅರಣ್ಯ ಪ್ರದೇಶಕ್ಕೆ ಕೊಂಡೊಯ್ದು ಸುರಕ್ಷಿತವಾಗಿ ಬಿಟ್ಟಿದ್ದಾರೆ. ಇತ್ತೀಚಿಗೆ ಅಂಕೋಲಾ ತಾಲ್ಲೂಕಿನ ಮಾರುಗದ್ದೆ ಗ್ರಾಮದ ಗಣಪ ರಾಮಗೌಡ ಎಂಬವರ ಮನೆಯಲ್ಲಿ ಸುಮಾರು 12 ಅಡಿ ಉದ್ದದ ಕಾಳಿಂಗ ಸರ್ಪ ಪ್ರತ್ಯಕ್ಷಗೊಂಡು, ಮನೆಯವರಲ್ಲಿ ಭಯದ ಉಂಟು ಮಾಡಿತ್ತು. ಅವರ್ಸಾದ ಪ್ರಸಿದ್ಧ ಉರಗ ಪ್ರೇಮಿ ಮಹೇಶ್ ನಾಯಕ್ ಮತ್ತು ಅವರ ಪುತ್ರ ಗಗನ್ ನಾಯ್ಕ್ ಕಟ್ಟಿಗೆಯ ರಾಶಿಯಲ್ಲಿ ಅಡಗಿದ್ದ ಸರ್ಪವನ್ನು ಸುರಕ್ಷಿತವಾಗಿ ಹಿಡಿದಿದ್ದರು. ನಂತರ, ಅರಣ್ಯ ಇಲಾಖೆಯ ಅಧಿಕಾರಿಗಳ ಸಹಕಾರದೊಂದಿಗೆ ಸಮೀಪದ ದಟ್ಟ ಅಭಯಾರಣ್ಯಕ್ಕೆ ಕೊಂಡೊಯ್ದು ಬಿಟ್ಟಿದ್ದರು.

## ಆ.15 ರೊಳಗೆ ನೀರು ಬಿಡದಿದ್ದರೆ ಬಿಜೆಪಿಯಿಂದ ಉಗ್ರ ಹೋರಾಟ

• **ಉದಯವಾಹಿನಿ, ಬಳ್ಳಾರಿ, :**

ತುಂಗಭದ್ರ ಜಲಾಶಯದಿಂದ ಎಡ ,ಬಲದಂಡೆಯ ಕಾಲವೆಗಳಿಗೆ ಕೃಷಿಗಾಗಿ ನೀರು ಬಿಡದೇ ಇದ್ದರೆ ಭಾರತೀಯ ಜನತಾ ಪಾರ್ಟಿಯಿಂದ ಉಗ್ರ ಹೋರಾಟ ನಡೆಸಲಿದೆಂದು ಪಕ್ಷದ ಮುಖಂಡ ಕೆ.ಎ.ರಾಮಲಿಂಗಪ್ಪ ಹೇಳಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು.ಜಲಾಶಯದಲ್ಲಿ ಈಗಾಗಲೇ 74 ಟಿಎಂಸಿ ನೀರು ಸಂಗ್ರಗವಾಗಿದ್ದರೂ. ಇನ್ನೂ ಸರ್ಕಾರ, ತುಂಗಭದ್ರ ಮಂಡಳಿ ಕಾಲಯವೆಗಳಿಗೆ ಕೃಷಿಗೆ ನೀರು ಬಿಡುತ್ತಿಲ್ಲ. ಈಗಾಗಲೇ ಒಂದು ತಿಂಗಳು ನಾಟಿಮಾಡುವುದು ಬಿಳಂಬವಾಗಿದೆ. ತಡವಾದಷ್ಟು ಇಳಯವರಿ ಕಡಿಮೆ ಆಗಲಿದೆ. ರೈತರು ಈಗಗಾಲೇ ಭತ್ತ, ಮೆಣಸಿನ ಸಸಿ ಹಾಕಿ ತಿಂಗಳು ಕಳೆದಿದೆ. ಕೂಡಲೇ ನೀರು ಬಿಡಬೇಕಿತ್ತು.ಜನಪ್ರತಿನಿಧಿಗಳು ಮೀನಾ ಮೇಷ ಎಣಿಸುತ್ತ. ಈ ತಿಂಗಳ 11 ಕ್ಕೆ 80 ಟಿಎಮ್ ಸಿ ನೀರು ಸಂಗ್ರಹವಾದರೆ ನೀರು ಬಿಡುವ ಬಗ್ಗೆ ಚರ್ಚಿಸಲು ತುಂಗಭದ್ರ ನಿರಾವರಿ ಸಲಹಾ ಸಮಿತಿ ಸಭೆ ಕರೆದಿದೆ. ಜಲಾಶಯದಲ್ಲಿ 26 ಟಿಎಂಸಿ ನೀರು ಸಂಗ್ರಹವಾದಾಗಲೇ ಕಾಲುವೆಗೆ ನೀರು ಬಿಡಲಾಗಿದೆ. ಹೀಗಿರುವಾಗ ಈಗ 70 ಕ್ಕೂ ಹೆಚ್ಚು ಟಿಎಂ ಸಿ ನೀರು ಇರುವಾಗ ನೀರು ಬಿಡಲು ಈ ಸರ್ಕಾರ ವಿಳಂಬ ಮಾಡುವುದು ಸರಿಯಲ್ಲ ಎಂದು ರಾಮಲಿಂಗಪ್ಪ ಹೇಳಿದ್ದಾರೆ.

# ಗ್ರಾಮದಲ್ಲಿ ಸರ್ಕಾರಿ ಜಮೀನು ಒತ್ತುವರಿ


• **ಉದಯವಾಹಿನಿ, ಬಳ್ಳಾರಿ, :**

ಜಿಲ್ಲೆಯ ಸಂಡೂರು ತಾಲ್ಲೂಕು ತೋರಣಗಲ್ಲು ಹೋಬಳಿಯ ಚಿಕ್ಕಂತಾಪುರ ಗ್ರಾಮದ ಭೂಮಿಯ ಸರ್ವೆ ನಂ:–53/'' ವಿಸ್ತೀರ್ಣ 1.28ಎಕರೆ ಸರ್ಕಾರಿ ಜಮೀನನ್ನು ಪದ್ಮವತಿ ಫೆರೋಸ್ ಲಿಮಿಟೆಡ್ ಎಟ (ಸ್ಟೀಲ್) ಲಿಮಿಟೆಡ್ ಕಂಪನಿಯವರು ಇದ್ದಲ್ಲು (ಕೊಕ್) ಸುಮಾರು 50ಅಡಿ ಎತ್ತರ ರಾಶಿಯನ್ನು ಹಾಕಿರುತ್ತಾರೆ. ಸದರಿ ಭೂಮಿಯಲ್ಲಿ ಮಾನ್ಯ ತಹಶೀಲ್ದಾರ್ ಸಂಡೂರು ಇವರು ಅತಿಕ್ರಮಣ ಮಾಡಬಾರದೆಂದು ನಾಮಫಲಕ ಹಾಕಿದರು. ಸದರಿ ಪದ್ಮವತಿ ಫೆರೋಸ್ ಲಿಮಿಟೆಡ್ ಎಟ (ಸ್ಟೀಲ್) ಲಿಮಿಟೆಡ್ ಕಂಪನಿಯವರ ಕಾನೂನು ಕ್ರಮ ಜರುಗಿಸಬೇಕೆಂದು ಕರವೇ ಕಾವಲುಪಡೆ ಆಗ್ರಹಿಸಿದೆ. ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು, ಸದರಿ ಭೂಮಿಯಲ್ಲಿ ಇದ್ದಲ್ಲು (ಕೊಕ್) ರಾಶಿ ರಾಶಿಗಳು ಹಾಕಿ ದಂಧೆ ಮಾಡುತ್ತಿದ್ದಾರೆ. ಸದರಿ ಕಂಪನಿಗೆ ತಿಂಗಳಿಗೆ ರೂ:–25,000/– ಪ್ರಕಾರ ಸರ್ಕಾರಕ್ಕೆ ರಾಯಲಿಟಿ ಕೊಡಬೇಕಾಗುತ್ತದೆ ಎಕ್ಕಂದೆ ಸುಮಾರು ಸದರಿ ಕಂಪನಿಯವರು 20ವರ್ಷಗಳಿಂದ ವಾಣಿಜ್ಯ ಧಂದೆ ಮಾಡಿ ಸಾಕಷ್ಟು ಲಾಭಪಡೆದಿರುತ್ತಾರೆ. ವರ್ಷಕ್ಕೆ 3ಲಕ್ಷ ರೂಪಾಯಿಗಳ ಪ್ರಕಾರ 20ವರ್ಷಗಳಿಗೆ 60ಲಕ್ಷ ರೂಪಾಯಿಗಳು ಸದರಿ ಕಂಪನಿಯವರ ಕಡೆಯಿಂದ ರಾಯಲಿಟಿ ವಸೂಲಿ ಮಾಡಬೇಕೆಂದು ತಮ್ಮಲ್ಲಿ ಕೇಳಿಕೊಳ್ಳತ್ತೇವೆ. ಸದರಿ ವರದಿ ಆಧಾರದ ಮೇಲೆ ತಹಶೀಲ್ದಾರ್ ಇವರು 01/07/2026 ದಂದು ಸದರಿ ಭೂಮಿಯನ್ನು ತೆರವುಗೊಳಿಸಲು ಒತ್ತುವರಿ ಮಾಡಿಕೊಂಡ ಕಂಪನಿಯವರಿಗೆ ನೋಟೀಸ್ ನೀಡಿರುತ್ತಾರೆ.

# ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಮನವಿ

• **ಉದಯವಾಹಿನಿ, ರಾಮದುರ್ಗ**

ತಾಲ್ಲೂಕಿನಲ್ಲಿ ಉಂಟಾಗಿರುವ ಭೀಕರ ಬರಗಾಲದಿಂದ ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣ ಸರ್ಕಾರದ ನೆರವು ನೀಡುವಂತೆ ವಿಧಾನ ಪರಿಷತ್ ಸದಸ್ಯ ಎನ್ ರವಿಕುಮಾರ್ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಮನವಿ ಸಲ್ಲಿಸಿದರು.ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಕೆ ಚಂದರಗಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರಾಮದುರ್ಗ ತಾಲೂಕಿನಲ್ಲಿ ಈ ವರ್ಷ ಮಳೆ ಕೊರತೆಯಿಂದಾಗಿ ಭೀಕರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ತಮ್ಮ ಜಮೀನುಗಳಲ್ಲಿ ಬೀಜ, ಗೊಬ್ಬರ ಹಾಗೂ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಹಣ ಖರ್ಚು ಮಾಡಿ ಬೆಳೆ ಬೆಳೆದಿದ್ದರೂ, ಸಮರ್ಪಕ ಮಳೆಯಾಗದೆ ಬೆಳೆಗಳು ಒಣಗುವ ಪರಿಸ್ಥಿತಿ ಎದುರಾಗಿದೆ. ರೈತರು ಸಾಲ ಮಾಡಿ ಬೀಜ, ಗೊಬ್ಬರ ಹಾಗೂ ಇತರ ಕೃಷಿ ಸಾಮಗ್ರಿಗಳನ್ನು ಖರೀದಿಸಿದ್ದಾರೆ. ಇದೀಗ ಮಳೆ


ಉದಯವಾಹಿನಿ ಚಿತ್ರ

ಕೊರತೆಯಿಂದ ಬೆಳೆ ನಷ್ಟವಾಗುತ್ತಿರುವುದರಿಂದ ರೈತರು ಆರ್ಥಿಕವಾಗಿ ಕಂಗಾಲಾಗಿದ್ದಾರೆ. ಕುಟುಂಬ ನಿರ್ವಹಣೆ ಹಾಗೂ ಕೃಷಿ ಸಾಲಗಳನ್ನು ತೀರಿಸುವುದು ರೈತರಿಗೆ ದೊಡ್ಡ ಸಮಸ್ಯೆಯಾಗಿದೆ.ಆದ್ದರಿಂದ ಸರ್ಕಾರವು ರಾಮದುರ್ಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಪರಿಗಣಿಸಿ, ಬೆಳೆ ನಷ್ಟದ ಸಮೀಕ್ಷೆಯನ್ನು ತಕ್ಷಣ ನಡೆಸಿ, ಅರ್ಹ ರೈತರಿಗೆ ಬೆಳೆ ಪರಿಹಾರ ನೀಡಬೇಕು. ರೈತರಿಗೆ ಅಗತ್ಯವಿರುವ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ನೀರಿನ ವ್ಯವಸ್ಥೆ ಮಾಡಬೇಕು. ಕೃಷಿ ಸಾಲಗಳ ಬಗ್ಗೆ ಸೂಕ್ತ ಪರಿಹಾರ ಕ್ರಮ ಕೈಗೊಂಡು ರೈತರ ನೆರವಿಗೆ ಸರ್ಕಾರ ತಕ್ಷಣ ಧಾವಿಸಬೇಕು.

ರೈತರು ದೇಶದ ಬೆನ್ನೆಲುಬಾಗಿದ್ದು, ಇಂತಹ ಸಂಕಷ್ಟದ ಸಮಯದಲ್ಲಿ ಸರ್ಕಾರವು ರೈತರ ಪರವಾಗಿ ನಿಂತು ಅಗತ್ಯ ನೆರವು ನೀಡಬೇಕೆಂದು ಮನವಿ ಸಲ್ಲಿಸಿದರು .ಈ ವೇಳೆ ಮಲ್ಲಿಕಾರ್ಜುನ ರಾಮದುರ್ಗ ರಾಜ್ಯ ಸಂಘಟನಾ ಕಾರ್ಯದರ್ಶಿಗಳು ಸುರೇಶ್ ಕುಂಜೇರಿ ತಾಲ್ಲೂಕ ಅಧ್ಯಕ್ಷರು ಮಹಾದೇವ್ ತೇವಟಗಿ ತಾಲ್ಲೂಕ ಗೌರವ ಅಧ್ಯಕ್ಷರು , ರಾಜು ಬಸೀನಾಯ್ಕರ್. ಮಂಜು ಕಟ್ಟಿ. ಅಶೋಕ್ ಯಾದವಾಡ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಉಪಸ್ಥಿತರಿದ್ದರು

# ಸಚಿವ ಸ್ಥಾನ ನಿರಾಕರಣೆಯ ಅಸಮಾಧಾನವನ್ನು ಅರ್ಥಪೂರ್ಣ ರಕ್ತದಾನ

## ಹಾನಗಲ್ ಶಾಸಕ ಶ್ರೀನಿವಾಸ್ ಮಾನೆ ಅವರಿಗೆ ಕರ್ನಾಟಕ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡದಿರುವ ಹಿನ್ನೆಲೆಯಲ್ಲಿ, ಅವರನ್ನು ಸಚಿವರನ್ನಾಗಿ ಮಾಡಲಾಗುತ್ತದೆ

• **ಉದಯವಾಹಿನಿ, ಹಾನಗಲ್:**

ರಾಜಕೀಯ ಅಸಮಾಧಾನ ಸಾಮಾನ್ಯವಾಗಿ ಪ್ರತಿಭಟನೆ, ಘೋಷಣೆಗಳು ಮತ್ತು ಧರಣಿಗಳ ಮೂಲಕ ವ್ಯಕ್ತವಾಗುತ್ತದೆ. ಆದರೆ ಹಾನಗಲ್‌ನ ಜನತೆ ತಮ್ಮ ಅಸಮಾಧಾನವನ್ನು ವಿಭಿನ್ನ ಹಾಗೂ ಮಾನವೀಯ ರೀತಿಯಲ್ಲಿ ವ್ಯಕ್ತಪಡಿಸಿದ್ದಾರೆ. ಪ್ರತಿಭಟನೆಯ ಭಾಗವಾಗಿ ರಕ್ತದಾನ ಮಾಡುವ ಮೂಲಕ ಹಲವಾರು ಜೀವಗಳನ್ನು ಉಳಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ.

ಹಾನಗಲ್ ಶಾಸಕ ಶ್ರೀನಿವಾಸ್ ಮಾನೆ ಅವರಿಗೆ ಕರ್ನಾಟಕ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡದಿರುವ ಹಿನ್ನೆಲೆಯಲ್ಲಿ, ಅವರನ್ನು ಸಚಿವರನ್ನಾಗಿ ಮಾಡಲಾಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದ ಅವರ ಬೆಂಬಲಿಗರು ಮತ್ತು ಕ್ಷೇತ್ರದ ಜನರು ತಮ್ಮ ಅಸಮಾಧಾನವನ್ನು ವಿಶಿಷ್ಟ ರಕ್ತದಾನ ಶಿಬಿರದ ಮೂಲಕ ವ್ಯಕ್ತಪಡಿಸಿದರು. ಒಟ್ಟು 901 ಮಂದಿ ರಕ್ತದಾನ ಮಾಡುವ ಮೂಲಕ ರಾಜಕೀಯ ಪ್ರತಿಭಟನೆಯನ್ನು ಗಮನಾರ್ಹ ಮಾನವೀಯ ಸೇವೆಯಾಗಿ ಪರಿವರ್ತಿಸಿದರು. ಸಾಮಾನ್ಯವಾಗಿ ರಕ್ತದಾನ ಶಿಬಿರಗಳಲ್ಲಿ 40ರಿಂದ 50 ಮಂದಿ ರಕ್ತದಾನ ಮಾಡುವ ಸಂದರ್ಭದಲ್ಲೇ 901 ಮಂದಿ ಭಾಗವಹಿಸಿರುವುದು ವಿಶೇಷ ಗಮನ ಸೆಳೆದಿದೆ. ಶ್ರೀನಿವಾಸ್ ಮಾನೆ ಅವರು ಕಳೆದ 25 ವರ್ಷಗಳಿಗೂ ಹೆಚ್ಚು ಕಾಲ ಸಾರ್ವಜನಿಕ ಮತ್ತು ರಾಜಕೀಯ ಜೀವನದಲ್ಲಿ ಸಕ್ರಿಯರಾಗಿದ್ದಾರೆ. ಅವರು ಎರಡು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದು, ಪ್ರಸುತ ಎರಡನೇ ಬಾರಿಗೆ ಶಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪಕ್ಷದೊಂದಿಗಿನ ಅವರ ದೀರ್ಘಕಾಲದ ಒಡನಾಟ, ರಾಜಕೀಯ ಅನುಭವ ಹಾಗೂ ಕ್ಷೇತ್ರಕ್ಕೆ ನೀಡಿರುವ ಕೊಡುಗೆಗಳನ್ನು ಪರಿಗಣಿಸಿ ಅವರಿಗೆ ಸಚಿವ ಸ್ಥಾನ ದೊರೆಯಲಿದೆ ಎಂಬ ನಿರೀಕ್ಷೆ ತಮ್ಮಲ್ಲಿತ್ತು



ಉದಯವಾಹಿನಿ ಚಿತ್ರ

**''ನಮಗೆ ಅಸಮಾಧಾನವಿದೆ. ಆದರೆ ನಮ್ಮ ಅಸಮಾಧಾನದಿಂದ ಯಾರಿಗೂ ನೋವಾಗಬಾರದು ಎಂಬುದು ನಮ್ಮ ಆಶಯ. ನಮಗೆ ಕೋಪವಿದ್ದರೆ, ಆ ಕೋಪವು ಜೀವಗಳನ್ನು ಉಳಿಸುವಂತಾಗಲಿ. ನಮ್ಮ ಭಾವನೆಗಳನ್ನು ವ್ಯಕ್ತಪಡಿಸುವುದರ ಜೊತೆಗೆ ಸಮಾಜಕ್ಕೆ ಉಪಯುಕ್ತವಾದ ಕೆಲಸ ಮಾಡು ವುದಕ್ಕೆ ರಕ್ತದಾನ ಒಂದು ಅರ್ಥಪೂರ್ಣ ಮಾರ್ಗ,'' ಎಂದು ಹೇಳಿದರು.**

**-ಬಸಂಗೌಡ ಪಾಟೀಲ್**

ಎಂದು ಅವರ ಬೆಂಬಲಿಗರು ತಿಳಿಸಿದ್ದಾರೆ.

ಆದರೆ ಈ ನಿರೀಕ್ಷೆ ಈಡೇರದ ಹಿನ್ನೆಲೆಯಲ್ಲಿ ಹಾನಗಲ್‌ನಲ್ಲಿ ಅವರ ಬೆಂಬಲಿಗರಲ್ಲಿ ಅಸಮಾಧಾನ ವ್ಯಕ್ತವಾಯಿತು. ಆದರೆ ತಮ್ಮ ಅಸಮಾಧಾನವನ್ನು ಹಿಂಸಾಚಾರ, ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ, ರಸ್ತೆ ತಡೆ ಅಥವಾ ಪ್ರತಿಕೃತಿ ದಹನದ ಮೂಲಕ ವ್ಯಕ್ತಪಡಿಸುವ ಬದಲು, ಶಾಸಕ ಶ್ರೀನಿವಾಸ್ ಮಾನೆ ಅವರ ಜನ್ಮದಿನವಾದ ಆ.6ರಂದು ರಕ್ತದಾನ ಮಾಡುವ ಮೂಲಕ ತಮ್ಮ ಪ್ರತಿಭಟನೆ ಯನ್ನು ದಾಖಲಿಸಿದರು.

901 ಮಂದಿ ರಕ್ತದಾನಿಗಳ ಭಾಗವಹಿಸುವಿಕೆ ಕಾರ್ಯಕ್ರಮಕ್ಕೆ ವಿಶೇಷ ಸಂದೇಶವನ್ನು ನೀಡಿತು. ಸಾಮಾನ್ಯ ರಾಜಕೀಯ ಆಕ್ರೋಶದ ಅಭಿವ್ಯಕ್ತಿಯಾಗಬಹುದಾಗಿದ್ದ ಕಾರ್ಯಕ್ರಮವು ಅಪಘಾತ ಕ್ಕೊಳಗಾದವರು, ವಿವಿಧ ಕಾಯಿಲೆಗಳಿಗೆ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳು ಹಾಗೂ ರಕ್ತದ ಅವಶ್ಯಕತೆ ಇರುವವರಿಗೆ ನೆರವಾಗುವಂತಹ ಮಾನವೀಯ ಸೇವೆಯಾಗಿ ರೂಪುಗೊಂಡಿತು.ಪ್ರತಿಭಟನೆಯ ಶಕ್ತಿ ಎಂದರೆ ಅದು ಸೃಷ್ಟಿಸುವ ಅಡ್ಡಿಪಡಿಸುವಿಕೆ ಅಥವಾ ಹಾನಿಯ ಪ್ರಮಾಣ ವಷ್ಟೇ ಅಲ್ಲ ಅದು ಸಮಾಜದ ಮೇಲೆ ಬೀರುವ ಸಕಾರಾತ್ಮಕ ಪರಿಣಾಮದಿಂದಲೂ ಅಳೆಯಬಹುದು ಎಂಬುದನ್ನು ಈ ವಿಶಿಷ್ಟ ಕಾರ್ಯಕ್ರಮ ತೋರಿಸಿಕೊಟ್ಟಿದೆ.

**ರಾಜಕೀಯ ಮೀರಿದ ಮಾನವೀಯ ಸಂದೇಶ:** ಈ ರಕ್ತದಾನ ಕಾರ್ಯಕ್ರಮವು ಸಾಮಾಜಿಕ ಏಕತೆಯ ಸಂದೇಶವನ್ನೂ ಸಾರಿತು.

ಹುಬ್ಬಳ್ಳಿಯ ಮೂರುಸಾವಿರ ಮಠದ ಡಾ. ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ, ಬೆಂಗಳೂರಿನ ಫಾದರ್ ದೀಪಕ್ ಜೋಸೆಫ್ ಮುಂಡಗೋಡಿನ ಮುಸ್ಲಿಂ ಧಾರ್ಮಿಕ ಮುಖಂಡ ಹಾಫಿಜ್ ಹಜರತ್ ಅಲಿ ಸುಳ್ಳಳ್ಳಿ ಅವರು ಈ ಕಾರ್ಯಕ್ರಮಕ್ಕೆ ಆಗಮಿಸಿ ಸಾಂಕೇತಿಕ ತುಲಾಭಾರ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಹಿಂದೂ, ಕ್ರೈಸ್ತ ಮತ್ತು ಮುಸ್ಲಿಂ ಸಮುದಾಯಗಳನ್ನು ಪ್ರತಿನಿಧಿಸುವ ಧಾರ್ಮಿಕ ಮುಖಂಡರ ಭಾಗವಹಿಸುವಿಕೆ ಕಾರ್ಯಕ್ರಮದ ಸಾಮಾಜಿಕ ಏಕತೆಯ ಸಂದೇಶವನ್ನು ಮತ್ತಷ್ಟು ಬಲಪಡಿಸಿತು. ರಕ್ತಕ್ಕೆ ಜಾತಿ, ಧರ್ಮ ಅಥವಾ ಆರ್ಥಿಕ ಸ್ಥಾನಮಾನವಿಲ್ಲ.

**ಹಿಂದೂ, ಮುಸ್ಲಿಂ, ಕ್ರೈಸ್ತ, ಶ್ರೀಮಂತ ಅಥವಾ ಬಡ, ಯುವಕ ಅಥವಾ ವೃದ್ಧ, ವಿದ್ಯಾವಂತ ಅಥವಾ ಅನಕ್ಷರಸ್ಥ ಯಾರ ರಕ್ತವಾದರೂ ಮಾನವ ಜೀವವನ್ನು ಉಳಿಸುವ ಸಂದರ್ಭದಲ್ಲಿ ಅದರ ಮೌಲ್ಯ ಒಂದೇ. ಹೀಗಾಗಿ ಈ ಕಾರ್ಯಕ್ರಮವು ಕೇವಲ ಸಚಿವ ಸ್ಥಾನಕ್ಕೆ ಸಂಬಂಧಿಸಿದ ರಾಜಕೀಯ ವಿಚಾರವನ್ನು ಮೀರಿ ಮಾನವೀಯತೆ, ಏಕತೆ ಮತ್ತು ಶಾಂತಿಯುತ ಪ್ರಜಾಸತ್ತಾತ್ಮಕ ಅಭಿವ್ಯಕ್ತಿಯ ವಿಶಾಲ ಸಂದೇಶವನ್ನು ನೀಡಿತು.**